# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 25 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 31-07-2026 ಪುಟ : 04 ಬೆಲೆ : 2-00


26/ಎ5487

## ಪಾಕಿಸ್ತಾನಿ ಕಾಶ್ಮೀರವಿಲ್ಲ, ಅದು ಪಾಕ್ ಆಕ್ರಮಿತ ಕಾಶ್ಮೀರವಷ್ಟೇ,

ನವದೆಹಲಿ : ಪಾಕಿಸ್ತಾನ ಆಕ್ರಮಿತ ಕಾಶ್ಮೀರವನ್ನು ಪಾಕಿಸ್ತಾನಿ ಕಾಶ್ಮೀರ ಎಂದು ಬಣ್ಣಿಸಿ ವರದಿ ಪ್ರಕಟಿಸಿದ್ದ ಅಮೆರಿಕದ ಪ್ರಸಿದ್ಧ 'ನ್ಯೂಯಾರ್ಕ್ ಟೈಮ್ಸ್' ಪತ್ರಿ-ಕೆಯ ಶೀರ್ಷಿಕೆಗೆ ಭಾರತ ಸರ್ಕಾರ ಮತ್ತು ಅಮೆರಿಕದಲ್ಲಿರುವ ಭಾರತೀಯ ರಾಯಭಾರ ಕಚೇರಿ ಅತ್ಯಂತ ಕಠಿಣ ಶಬ್ದಗಳಲ್ಲಿ ಆಕ್ಷೇಪ ವ್ಯಕ್ತಪಡಿಸಿದೆ. ಪತ್ರಿಕೆಯ ಶೀರ್ಷಿಕೆಯು 'ಸಂಪೂರ್ಣ ತಪ್ಪಾದ ಮತ್ತು ಜನರನ್ನು ದಾರಿತಪ್ಪಿಸುವಂತಹದ್ದು' ಎಂದು ಬಣ್ಣಿಸಿರುವ ಅಮೆರಿಕದಲ್ಲಿನ ಭಾರತೀಯ ರಾಯಭಾರ ಕಚೇರಿ, ಪ್ರಪಂಚದಲ್ಲಿ ಪಾಕಿಸ್ತಾನಿ ಕಾಶ್ಮೀರ ಎಂಬುದು ಯಾವುದೂ ಇಲ್ಲ, ಅದು ಪಾಕಿಸ್ತಾನದಿಂದ ಅಕ್ರಮವಾಗಿ ಆಕ್ರಮಿಸಲ್ಪಟ್ಟ ಭಾರತದ ಪಾಕ್ ಆಕ್ರಮಿತ ಕಾಶ್ಮೀರ ಮಾತ್ರ ಎಂದು ಎಕ್ಸ್ ಪ್ಲಾಟ್‌ಫಾರ್ಮ್‌ನಲ್ಲಿ ಸ್ಪಷ್ಟಪಡಿಸಿದೆ. ಜಮ್ಮು-ಕಾಶ್ಮೀರ ಮತ್ತು ಲಡಾಖ್ ಕೇಂದ್ರಾಡಳಿತ ಪ್ರದೇಶಗಳು ಭಾರತದ ಸಂಪೂರ್ಣ ಅವಿಭಾಜ್ಯ ಹಾಗೂ ಬೇರ್ಪಡಿಸಲಾಗದ ಭಾಗಗಳಾಗಿವೆ ಮತ್ತು ಎಂದೆಂದಿಗೂ ಹಾಗೆಯೇ ಇರಲಿವೆ.



# ಕಾವೇರಿ ಜಲ ವಿವಾದ: ಭಾನುವಾರ ಸರ್ವಪಕ್ಷ ಸಭೆ


## ಸಿಎಂ ಡಿ.ಕೆ ಶಿವಕುಮಾರ್; ಮಾಜಿ ಮುಖ್ಯಮಂತ್ರಿಗಳು, ಸಂಸದರು, ಶಾಸಕರಿಗೆ ಆಹ್ವಾನ!

ನವದೆಹಲಿ: ಕಾವೇರಿ ನೀರಿನ ವಿಚಾರವಾಗಿ ಬರುವ ಭಾನುವಾರ (ಆಗಸ್ಟ್ 2) ಗೃಹ ಕಚೇರಿ ಕೃಷ್ಣಾದಲ್ಲಿ ಸರ್ವಪಕ್ಷ ಸಭೆ ಕರೆಯಲಾಗಿದೆ. ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ಕಾವೇರಿ ಜಲಾನಯನ ಪ್ರದೇಶದ ಸಂಸದರು, ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಸಿಎಂ ಡಿ ಕೆ ಶಿವಕುಮಾರ್ ಗುರುವಾರ ತಿಳಿಸಿದ್ದಾರೆ.

ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಇಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಮೇಲ್ಮನವಿ ಸಲ್ಲಿಸಿದ್ದು, ಮುಂದೆ ಈ ವಿಚಾರವನ್ನು ಹೇಗೆ ತೆಗೆದುಕೊಂಡು ಹೋಗಬೇಕು ಎಂದು ಸರ್ವಪಕ್ಷ ಸಭೆಯಲ್ಲಿ ಚರ್ಚೆ ಮಾಡಲಾಗುವುದು ಎಂದರು.

ಈ ವಿಚಾರವಾಗಿ ಸಂಸದರು, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಸೋಮಣ್ಣ, ಜಗದೀಶ್ ಶೆಟ್ಟರ್, ಬೊಮ್ಮಾಯಿ ಅವರ ಜೊತೆ ಚರ್ಚೆ ಮಾಡಿದ್ದು, ಅವರು ರಾಜ್ಯದ ಹಿತಕ್ಕಾಗಿ ಶಕ್ತಿ ಮೀರಿ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿಸಿದರು.

"ಕರ್ನಾಟಕ ಕಾಂಗ್ರೆಸ್ ನಾಯಕರ ಬದಲು ದೆಹಲಿ ಸರ್ಕಾರವನ್ನು ಭೇಟಿ ಮಾಡಿ ಎಂದು ತಮಿಳುನಾಡು ಸಿಎಂ ವಿಜಯ್ ಅವರಿಗೆ ಡಿಎಂಕೆ ನಾಯಕ ಅನ್ಬುಮಣಿ ಸಲಹೆ ನೀಡಿರುವ ಬಗ್ಗೆ ಕೇಳಿದಾಗ, "ಆ ವಿಚಾರವಾಗಿ ಪ್ರತಿಕ್ರಿಯೆ






ನೀಡುವುದಿಲ್ಲ. ನಮಗೆ ಪರಸ್ಪರ ಕಿತ್ತಾಟ ಮಾಡಲು ಇಷ್ಟವಿಲ್ಲ. ನೆಲದ ಕಾನೂನು ಇದೆ. ನಾವು ಪರಸ್ಪರ ಗೌರವಿಸಬೇಕು. ಇಡೀ ದೇಶ ಒಂದಾಗಿ ಕೆಲಸ ಮಾಡಬೇಕು" ಎಂದು ತಿಳಿಸಿದರು.

ಸಚಿವ ಸಂಪುಟ ವಿಸ್ತರಣೆ ಕುರಿತು ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, "ಯಡಿಯೂರಪ್ಪನವರು ಕೂಡ ಸಚಿವ ಸಂಪುಟ ರಚನೆ ಮಾಡದೇ ಅಧಿಕಾರ ಮಾಡಿರಲಿಲ್ಲವೇ? ಆಗ ಅಪ್ಪ-ಮಗ ಅಧಿಕಾರವನ್ನು ಅನುಭವಿಸಲಿಲ್ಲವೇ?" ಎಂದು ಮರುಪ್ರಶ್ನಿಸಿದರು.

## ಬರ ಘೋಷಣೆಗೆ ಚಲೋ ಹೊಲ ಗದ್ದೆ ಧರಣಿ ಆರಂಭ:

## ಸಾಲಮನ್ನಾ ಮಾಡಲು ಅಶೋಕ ಆಗ್ರಹ!



ಬಳ್ಳಾರಿ: ರಾಜ್ಯ ಸರ್ಕಾರ ಕೂಡಲೇ ಬರಗಾಲ ಘೋಷಣೆ ಮಾಡದಿದ್ದರೆ ಆಗಸ್ಟ್ 3 ರಿಂದ ಚಲೋ ಹೊಲ ಗದ್ದೆ ಪ್ರತಿಭಟನೆ ಮಾಡುತ್ತೇವೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಎಚ್ಚರಿಸಿದರು. ಕರೆಕಲ್ ಗ್ರಾಮಕ್ಕೆ ಭೇಟಿ ನೀಡಿ ಬೆಳೆ ಹಾನಿ ಪರಿಶೀಲಿಸಿದ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಎಲ್ಲಾ ಜಿಲ್ಲೆಗಳಲ್ಲಿ ಬರ ಇದ್ದರೂ ರಾಜ್ಯ ಸರ್ಕಾರ ಬರ ಘೋಷಣೆ ಮಾಡಿಲ್ಲ. ಕೂಡಲೇ ಬರ ಘೋಷಿಸದಿದ್ದರೆ ನಾವೆಲ್ಲರೂ ರೈತರ ಹೊಲದಲ್ಲಿ ಕುಳಿತು ಧರಣಿ ಮಾಡುತ್ತೇವೆ. ರೈತರು ಕಂಗಾಲಾಗಿ ಬೀದಿಗಿಳಿದು ಹೋರಾಟ ಮಾಡುತ್ತಿದ್ದಾರೆ. ಎಲ್ಲೂ ಸಣ್ಣ ಮೊಳಕೆ ಕೂಡ ಬಂದಿಲ್ಲ ಎಂದರು.

ಬಳ್ಳಾರಿಯ ಕಾಂಗ್ರೆಸ್ ಶಾಸಕರು ಫೈವ್ ಸ್ಟಾರ್ ಹೋಟೆಲ್‌ಗಳಲ್ಲಿರುವಾಗ ಇಡೀ ಜಿಲ್ಲೆಯಲ್ಲಿ ರೈತರು ಬಿತ್ತನೆ ಮಾಡಲಾಗದ ಪರಿಸ್ಥಿತಿಯಲ್ಲಿದ್ದಾರೆ.

ಶೇ.18 ರಷ್ಟು ಬಿತ್ತನೆ ನಡೆದು 50 ದಿನಗಳು ಕಳೆದಿವೆ. ಮೆಕ್ಕೆಜೋಳ, ಹತ್ತಿ ಮೊದಲಾದ ಬೆಳೆಗಳ ಬಿತ್ತನೆ ನಡೆದಿದ್ದರೂ ಸಸಿಗಳು ನೆಲದಿಂದ ಮೇಲಕ್ಕೂ ಬಂದಿಲ್ಲ. ಇನ್ನು

2ನೇ ಪುಟಕ್ಕೆ..

## ಬಾಗಲಕೋಟೆ ಸರ್ಕಾರಿ ಆಸ್ಪತ್ರೆಯಲ್ಲಿ ಭ್ರೂಣ ಹತ್ಯೆ ಶಂಕೆ:

## ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಅನುಮಾನ

ಬಾಗಲಕೋಟೆ: ನಗರದ 50 ಹಾಸಿಗೆಯ ಸರ್ಕಾರಿ ಆಸ್ಪತ್ರೆಯಲ್ಲಿ ಭ್ರೂಣ ಹತ್ಯೆ ನಡೆಯುತ್ತಿರಬಹುದು ಎಂಬ ಗಂಭೀರ ಅನುಮಾನವನ್ನು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ವ್ಯಕ್ತಪಡಿಸಿದ್ದಾರೆ.

ಬಾಗಲಕೋಟೆಯ ಸರ್ಕಾರಿ ಆಸ್ಪತ್ರೆಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಮಾತನಾಡಿದ ಅವರು, ಈ ಆಸ್ಪತ್ರೆಯಲ್ಲಿ ಪ್ರತಿದಿನ ಸರಾಸರಿ 30 ಹೆರಿಗೆಗಳಾಗುತ್ತಿವೆ. ಆದರೆ, ದಾಖಲೆಗಳನ್ನು ಗಮನಿಸಿದಾಗ ಹೆಣ್ಣು ಮಕ್ಕಳಿಗಿಂತ ಗಂಡು ಮಕ್ಕಳ ಜನನ ಪ್ರಮಾಣವೇ ಹೆಚ್ಚಿರುವುದು ಕಂಡುಬಂದಿದೆ. ಸಾಮಾನ್ಯವಾಗಿ ಹೆಣ್ಣು ಮಗುವಿನ ಜನನ ಪ್ರಮಾಣ ಹೆಚ್ಚಿರಬೇಕು, ಆದರೆ ಇಲ್ಲಿ ಗಂಡು ಮಕ್ಕಳ ಸಂಖ್ಯೆ ಹೆಚ್ಚಿರುವುದು ಭ್ರೂಣ ಹತ್ಯೆ ನಡೆಯುತ್ತಿರಬಹುದು ಎಂಬ ಬಲವಾದ ಸಂಶಯಕ್ಕೆ ಕಾರಣವಾಗಿದೆ ಎಂದು ತಿಳಿಸಿದರು. ಆಸ್ಪತ್ರೆಯ ಜನನ ಪ್ರಮಾಣಕ್ಕೆ ಸಂಬಂಧಿಸಿದಂತೆ ಆರೋಗ್ಯ



ಇಲಾಖೆಯಿಂದ ಸಂಪೂರ್ಣ ಮಾಹಿತಿ ಹಾಗೂ ಅಧಿಕೃತ ದಾಖಲೆಗಳನ್ನು ತರಿಸಿಕೊಂಡು ಪರಿಶೀಲಿಸುವುದಾಗಿ ಅವರು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಆಸ್ಪತ್ರೆಯ ನೈರ್ಮಲ್ಯದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಇಡೀ ಆಸ್ಪತ್ರೆಯ ಸ್ವಚ್ಛತೆ ಕಾಪಾಡಲು ಕೇವಲ ಇಬ್ಬರೇ ನೌಕರರಿದ್ದಾರೆ. ಹೀಗಾಗಿ ತಕ್ಷಣವೇ ಆರೋಗ್ಯ ಇಲಾಖೆಯ ಆಯುಕ್ತರೊಂದಿಗೆ ಮಾತನಾಡಿ ಹೆಚ್ಚಿನ 'ಡಿ' ದರ್ಜೆ ಸಿಬ್ಬಂದಿಯನ್ನು ನೇಮಕ ಮಾಡಲು ಸೂಚನೆ ನೀಡಲಾಗಿದೆ ಎಂದರು. ತಮ್ಮ ಭೇಟಿಯ ವೇಳೆ ಆಸ್ಪತ್ರೆಗೆ ಬಂದಿದ್ದ ಸಾರ್ವಜನಿಕರು ಹಾಗೂ ಮಹಿಳೆಯರ ಕುಂದುಕೊರತೆಗಳನ್ನು ಆಲಿಸಿದ ನಾಗಲಕ್ಷ್ಮಿ ಚೌಧರಿ ಅವರು, ಸಂತ್ರಸ್ತ ಮಹಿಳೆಯರಿಗೆ ಸಾಂತ್ವನ ಹೇಳಿದರು. ಸಾರ್ವಜನಿಕರ ಸಮಸ್ಯೆಗಳನ್ನು ಶೀಘ್ರವಾಗಿ ಬಗೆಹರಿಸುವಂತೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಿದ್ದಾರೆ.

## ರೈತರ ಬೆಳೆ ಸಾಲ ಮನ್ನಾ ಮಾಡುವಂತೆ ಆಗ್ರಹ

### ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಬೃಹತ್ ಪ್ರತಿಭಟನೆ



ಹೊಸಪೇಟೆ : ವಿಜಯನಗರ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಮಳೆ ಅಭಾವ ಹಾಗೂ ಮುಂಗಾರು ಬೆಳೆ ವೈಫಲ್ಯದಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ನೀಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ರಿ) ವತಿಯಿಂದ ಗುರುವಾರ ಹೊಸಪೇಟೆಯಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯ ನೇತೃತ್ವವನ್ನು ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ರಿ) ವಿಜಯನಗರ ಜಿಲ್ಲಾ ಅಧ್ಯಕ್ಷ ಸಿ.ಎ. ಗಾಳೆಪ್ಪ ವಹಿಸಿದ್ದರು. ಪ್ರತಿಭಟನೆ ಬೆಳಗ್ಗೆ 11 ಗಂಟೆಗೆ ನಗರದ ಡಾ. ಪುನೀತ್ ರಾಜಕುಮಾರ್

2ನೇ ಪುಟಕ್ಕೆ...

## 'ಕ್ಷಮೆಯಾಚಿಸಿ ರಾಜೀನಾಮೆ ನೀಡಿ'; ಖರ್ಗೆ ವಾಗ್ದಾಳಿ

ನವದೆಹಲಿ : ಕಾಕ್ರೋಚ್ ಜನತಾ ಪಾರ್ಟಿ ಪ್ರತಿಭಟನೆಯ ವೇಳೆ ನಡೆದ ಪೊಲೀಸರ ಹಲ್ಲೆಯ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ವಹಿಸಿರುವ ಮೌನವನ್ನು ಕಾಂಗ್ರೆಸ್ ಮುಖ್ಯಸ್ಥ ರಾಗೂ ರಾಜ್ಯಸಭಾ ಸಂಸದ ಮಲ್ಲಿಕಾರ್ಜುನ ಖರ್ಗೆ ತೀವ್ರವಾಗಿ ಖಂಡಿಸಿದ್ದಾರೆ. ಪರೀಕ್ಷಾ ಅಕ್ರಮ ತಡೆ ವಿಧೇಯಕವನ್ನು ಮೇಲ್ಮನೆಯಲ್ಲಿ ಮಂಡಿಸಿದ ನಂತರ ಮಾತನಾಡಿದ ಕಾಂಗ್ರೆಸ್ ಸಂಸದ ಮಲ್ಲಿಕಾರ್ಜುನ ಖರ್ಗೆ, ಸಂಸತ್ತಿನ ಕಲಾಪಕ್ಕೆ ಗೈರುಹಾಜರಾಗಿರುವುದಕ್ಕೆ ಗೃಹ ಸಚಿವ ಅಮಿತ್ ಶಾ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಂದ ಸ್ಪಷ್ಟನೆ ಕೋರಿದರು. ಕಚೇರಿಯೊಳಗೆ ಅಡಗಿ ಕುಳಿತಿರುವ ಅಮಿತ್ ಶಾ ಅವರನ್ನು ಎಳೆದುಕೊಂಡು ಬಂದು ಜನರಿಗೆ ಒಪ್ಪಿಸಬೇಕು ಎಂದು ಖರ್ಗೆ ವಾಗ್ದಾಳಿ ನಡೆಸಿದರು. ಇದರಿಂದ ಸದನದಲ್ಲಿ ಗದ್ದಲ ಉಂಟಾಯಿತು.

ಇಂದು ಪರೀಕ್ಷಾ ಅಕ್ರಮ ತಡೆ ತಿದ್ದುಪಡಿ ವಿಧೇಯಕವನ್ನು ಮೇಲ್ಮನೆಯಲ್ಲಿ ಮಂಡಿಸಿದ ನಂತರ ಮಾತನಾಡಿದ ರಾಜ್ಯಸಭಾ ಹಿರಿಯ ಸಂಸದ ಹಾಗೂ ಕಾಂಗ್ರೆಸ್ ಮುಖ್ಯಸ್ಥ ಮಲ್ಲಿಕಾರ್ಜುನ ಖರ್ಗೆ, "ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ವಿರುದ್ಧ ನಡೆದ ಹಿಂಸಾಚಾರದ ಕುರಿತು ಸರ್ಕಾರ ಸತ್ಯವನ್ನು ಹೊರಹಾಕಬೇಕು. ಅಮಿತ್ ಶಾ ಅವರು ಮುಚ್ಚಿದ ಬಾಗಿಲ ಹಿಂದೆ ಅಡಗಿರಲು ಸಾಧ್ಯವಿಲ್ಲ" ಎಂದು ವಾಗ್ದಾಳಿ ನಡೆಸಿದರು.





ಸದನವನ್ನು ಉದ್ದೇಶಿಸಿ ಮಾತನಾಡಿದ ಖರ್ಗೆ, ಜುಲೈ 20ರಂದು ಸಿಜೆಪಿ ಹಮ್ಮಿಕೊಂಡಿದ್ದ 'ಚಲೋ ಸಂಸತ್' ಮೆರವಣಿಗೆಯ ವೇಳೆ ಪ್ರತಿಭಟನಾಕಾರರ ವಿರುದ್ಧ ನಡೆದ ಭದ್ರತಾ ಪಡೆಗಳ ಕ್ರಮದ ಕುರಿತು ಗೃಹ ಸಚಿವರು ಮೌನ ವಹಿಸಿರುವುದನ್ನು ಕಂಡು "ಯಾರಾದರೂ ನಿಮ್ಮ ಬಾಯಿಯನ್ನು ಹೊಲಿದಿದ್ದಾರೆಯೇ?" ಎಂದು ಪ್ರಶ್ನಿಸಿದರು. "ನೀವು ದೇಶದ ಗೃಹ ಸಚಿವರು. ಈ ಘಟನೆ ನಡೆದಿದ್ದು ದೆಹಲಿಯಲ್ಲಿ. ಇಷ್ಟೆಲ್ಲಾ ನಡೆಯುತ್ತಿದ್ದರೂ ನೀವು ಬಾಯಿ ಬಿಡುತ್ತಿಲ್ಲ. ಯಾರಾದರೂ ನಿಮ್ಮ ಬಾಯಿಯನ್ನು ಹೊಲಿದಿದ್ದಾರೆಯೇ?" ಎಂದು

2ನೇ ಪುಟಕ್ಕೆ..

# ಕಾಯಕ ಮತ್ತು ದಾಸೋಹ ಪರಂಪರೆ ಇಂದಿಗೂ ಜೀವಂತ: ಡಾ. ಕೆ. ರವೀಂದ್ರನಾಥ್



ಕೂಡ್ಲಿಗಿ: ಬಸವಾದಿ ಶರಣರು ಪ್ರತಿಪಾದಿಸಿದ "ಕಾಯಕವೇ ಕೈಲಾಸ" ಹಾಗೂ "ದಾಸೋಹವೇ ಧರ್ಮ" ಎಂಬ ತತ್ವಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿದ್ದು, ಅವುಗಳ ಅನುಷ್ಠಾನದಿಂದ ಸಮಾನತೆ ಮತ್ತು ಸೇವಾ ಮನೋಭಾವವನ್ನು ಬೆಳೆಸಬಹುದು ಎಂದು ಹಂಪಿ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಡಾ. ಕೆ. ರವೀಂದ್ರನಾಥ್ ಹೇಳಿದರು.

ಅವರು ಕಾನಾ ಮಡಗು ಶರಣಬಸವೇಶ್ವರ ದಾಸೋಹ ಮಠದ ಆವರಣದಲ್ಲಿ ಆಯೋಜಿಸಿದ್ದ ದಾಸೋಹ ಪೌರ್ಣಿಮೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ಶರಣರ ಕಾಯಕ ಮತ್ತು ದಾಸೋಹ ಪರಂಪರೆ ಇತಿಹಾಸದ ಪುಟಗಳಿಗೆ ಮಾತ್ರ ಸೀಮಿತವಾಗಿಲ್ಲ. ಇಂದಿಗೂ ಅನೇಕ ಮಠಗಳು, ಧಾರ್ಮಿಕ ಸಂಸ್ಥೆಗಳು ಹಾಗೂ ಸಮಾಜಸೇವಾ ಸಂಘಟನೆಗಳು ಅನ್ನದಾಸೋಹ, ಶಿಕ್ಷಣ, ಆರೋಗ್ಯ ಸೇವೆ ಹಾಗೂ ಮಾನವೀಯ ಕಾರ್ಯಗಳ ಮೂಲಕ ಈ ಮೌಲ್ಯಗಳನ್ನು ಜೀವಂತವಾಗಿರಿಸಿಕೊಂಡಿವೆ ಎಂದು ಅವರು ತಿಳಿಸಿದರು. ಶ್ರಮಕ್ಕೆ ಗೌರವ ನೀಡುವ ಮನೋಭಾವವೇ ಕಾಯಕದ ಸಾರವಾಗಿದ್ದು, ದುಡಿದು ಸಂಪಾದಿಸಿದ ಸಂಪತ್ತನ್ನು ಸಮಾಜದ ಒಳಿತಿಗಾಗಿ ಹಂಚಿಕೊಳ್ಳುವುದೇ ದಾಸೋಹದ ನಿಜವಾದ ಅರ್ಥವಾಗಿದೆ. ಇಂದಿನ ಯುವಜನತೆ ಬಸವಣ್ಣನವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಪ್ರಾಮಾಣಿಕ ಶ್ರಮ, ಸಾಮಾಜಿಕ ಕಾಳಜಿ ಹಾಗೂ ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಸಮಾಜದಲ್ಲಿ ಜಾತಿ, ಮತ, ಪಂಥಗಳ ಭೇದವಿಲ್ಲದೆ ಸಮಾನತೆ ಮತ್ತು ಸಹಬಾಳ್ವೆಯನ್ನು ಬೆಳೆಸುವ ಶಕ್ತಿ ಬಸವ ತತ್ವಗಳಲ್ಲಿದ್ದು, ಕಾಯಕ ಮತ್ತು ದಾಸೋಹ ಮೌಲ್ಯಗಳನ್ನು ಪ್ರತಿಯೊಬ್ಬರೂ ಅಳವಡಿಸಿಕೊಂಡಾಗ ಮಾತ್ರ ಆರೋಗ್ಯಕರ ಹಾಗೂ ಸಮಾನತೆಯ ಸಮಾಜ ನಿರ್ಮಾಣ ಸಾಧ್ಯ ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಆರಂಭದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಎನ್.ಎಂ. ರವಿಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಳಿಕ ಷ.ಬ್ರ. ಯೋಗಿರಾಜೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ಪಾದಪೂಜೆ ನೆರವೇರಿಸುವ ಮೂಲಕ ದಾಸೋಹ ಪೌರ್ಣಿಮೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ದಾ.ಮ. ಐಮಡಿ ಶರಣಾರ್ಯರು (ಧರ್ಮಾಧಿಕಾರಿಗಳು) ವಹಿಸಿದ್ದರು. ಹಗರಿಬೊಮ್ಮನಹಳ್ಳಿ ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ಪಿ.ಎಂ. ಮಂಜುನಾಥ್ ಕಾರ್ಯಕ್ರಮದ ಮಹತ್ವ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ನೀರಗಂಟಿ ಶರಣಪ್ಪ, ಚನ್ನವೀರ ಸ್ವಾಮಿ, ಎಚ್.ಎಂ.ಬಿ. ಗುರುಮೂರ್ತಿ, ಕೆ. ಸುಭಾಷ್ ಚಂದ್ರ, ಆಲೂರು ಮಲ್ಲಿಕಾರ್ಜುನ, ಸುರೇಶ್, ಸೋಮಶೇಖರಪ್ಪ, ತಿಪ್ಪೇಸ್ವಾಮಿ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ತಳವಾರ್ ಶರಣಪ್ಪ, ಶರಣ ಸಾಹಿತ್ಯಾಸಕ್ತರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ನಿವೃತ್ತ ನೌಕರರ ಸಂಘದ ಅಧ್ಯಕ್ಷ ತಳವಾರ್ ಶರಣಪ್ಪ ಸ್ವಾಗತಿಸಿದರು. ದಿವಾಕರ್ ನಾರಾಯಣ ಕಾರ್ಯಕ್ರಮ ನಿರೂಪಿಸಿದರು. ನುಂಕೇಶ್ ಓಬಶೆಟ್ಟಿಹಳ್ಳಿ ಅವರ ತಂಡದಿಂದ ವಚನ ಗಾಯನ ಕಾರ್ಯಕ್ರಮ ನಡೆಯಿತು.

## ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ

# ಶಾಸಕ ರಂಗನಾಥ್ ಸೂಚನೆ




ಕುಣಿಗಲ್ : ತಾಲೂಕು ಪಂಚಾಯಿತಿಯಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಮಾತನಾಡಿದ ಕುಣಿಗಲ್ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಹೆಚ್.ಡಿ. ರಂಗನಾಥ್ ಅವರು, ತಾಲೂಕಿನಲ್ಲಿ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡು, ಸಾರ್ವಜನಿಕರಿಗೆ ನಿರಂತರವಾಗಿ ಕುಡಿಯುವ ನೀರಿನ ಪೂರೈಕೆ ಕಲ್ಪಿಸಬೇಕು ಎಂದು ಸೂಚಿಸಿದರು.

ತಾಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಲಭ್ಯತೆ ಕುರಿತು ನಿರಂತರ ನಿಗಾ ವಹಿಸಿ, ಸಮಸ್ಯೆ ಎದುರಾಗುವ ಗ್ರಾಮಗಳಲ್ಲಿ ತಕ್ಷಣವೇ ಪರ್ಯಾಯ ವ್ಯವಸ್ಥೆ ಕಲ್ಪಿಸಿ, ಯಾವುದೇ ಹಳ್ಳಿಯ ಜನರು ನೀರಿನ ಕೊರತೆಯಿಂದ ತೊಂದರೆ ಅನುಭವಿಸದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಮಾನ್ಯ ಶಾಸಕರು ಅಧಿಕಾರಿಗಳಿಗೆ ನೀಡಿದ ಪ್ರಮುಖ ಸೂಚನೆಗಳು*

ಕುಣಿಗಲ್ ತಾಲೂಕಿನಲ್ಲಿ ಇದುವರೆಗೆ ಕೊರೆಸಲಾಗಿರುವ ಬೋರ್‌ವೆಲ್‌ಗಳ ಸಮರ್ಪಕ ಬಳಕೆ ಹಾಗೂ ನಿರ್ವಹಣೆಗೆ ಆದ್ಯತೆ ನೀಡಬೇಕು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಾರ್ವಜನಿಕರಿಗೆ ನೀರಿನ ಲಭ್ಯತೆ ಹಾಗೂ ಮಿತವ್ಯಯದ ಬಳಕೆಯ ಕುರಿತು ನಿರಂತರವಾಗಿ ಅರಿವು ಮೂಡಿಸಬೇಕು.

ಖಾಸಗಿ ಬೋರ್‌ವೆಲ್ ಹೊಂದಿರುವ ರೈತರು ಪಂಚಾಯಿತಿಗೆ ಉಚಿತವಾಗಿ ಕುಡಿಯುವ ನೀರು ಒದಗಿಸಿದರೆ, ಅಂತಹ ರೈತರನ್ನು ಸ್ವಾತಂತ್ರ್ಯ ದಿನಾಚರಣೆಯಂದು ತಾಲೂಕು ಮಟ್ಟದಲ್ಲಿ ಗುರುತಿಸಿಸನ್ಮಾನಿಸಲಾಗುವುದು.

ಕುಡಿಯುವ ನೀರಿನ ಸಮಸ್ಯೆ ಉಂಟಾದ ತಕ್ಷಣ ಸಂಬಂಧಿತ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಬೇಕು.

ಅಗತ್ಯವಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುವ ವ್ಯವಸ್ಥೆ ಕಲ್ಪಿಸಬೇಕು.

ಕುಡಿಯುವ ನೀರಿನ ವಿಷಯದಲ್ಲಿ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶವಿಲ್ಲ. ಪ್ರತಿಯೊಬ್ಬ ಅಧಿಕಾರಿಯೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ, ತಾಲೂಕಿನ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು ಎಂದು ಮಾನ್ಯ ಶಾಸಕರು ಡಾ. ಹೆಚ್.ಡಿ. ರಂಗನಾಥ್ ತಿಳಿಸಿದರು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಹಶೀಲ್ದಾರ್, ಕೆಡಿಪಿ ನಾಮನಿರ್ದೇಶಿತ ಸದಸ್ಯರು, ವಿವಿಧ ಇಲಾಖೆಗಳ ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

# ಗುರುಪೂರ್ಣಿಮೆ ಅಂಗವಾಗಿ ಗುರುವಂದನೆ ಕಾರ್ಯಕ್ರಮ

ಕುಣಿಗಲ್ : ಪಟ್ಟಣದ ಜ್ಞಾನಭಾರತಿ ವಿದ್ಯಾ ಸಂಸ್ಥೆಯ ಆಶ್ರಯದಲ್ಲಿ ಹಳೆ ವಿದ್ಯಾರ್ಥಿಗಳು ಹಾಗೂ ಈಗಿನ ವಿದ್ಯಾರ್ಥಿಗಳು ಗುರುಪೂರ್ಣಿಮೆ ಅಂಗವಾಗಿ ಗುರುವಂದನೆ ಕಾರ್ಯಕ್ರಮವು ಪ್ರಾಂಶುಪಾಲರಾದ ಗೋವಿಂದೇಗೌಡ ರವರ ನೇತೃತ್ವದಲ್ಲಿ ನಡೆಯಿತು. ಈ ಸಂದರ್ಭದಲ್ಲಿ ಗೋವಿಂದೇಗೌಡ ರವರು ಮಾತನಾಡುತ್ತಾ ವಿದ್ಯಾರ್ಥಿಗಳು ತಮ್ಮ ಕುಟುಂಬಗಳ ಹಿನ್ನೆಲೆ ತಂದೆ ತಾಯಿಗಳ ಆಶಯವನ್ನು ಮೆಲುಕು ಹಾಕಿ ಗುರಿ ಸಾಧಿಸಲು ಪ್ರೇರಣೆ ಆಗುತ್ತದೆ ತಮ್ಮ ಭವಿಷ್ಯ ಉಜ್ವಲಗೊಳ್ಳಲು ಸಹಕಾರಿಯಾಗುತ್ತದೆ ವಿದ್ಯಾರ್ಥಿಗಳ ದೆಸೆಯಲ್ಲಿ ವಿದ್ಯಾರ್ಥಿಗಳು ಪಾಠ ಪ್ರವಚನಗಳ ಬಗ್ಗೆ ಹೆಚ್ಚಿನ ಆದ್ಯತೆ ನೀಡಿ ದೂರದರ್ಶನ ಹಾಗೂ ಮೊಬೈಲ್ ಗಳಿಂದ ದೂರ ಸರಿದೂ ತಮ್ಮ ಗುರಿ ಸಾಧನೆಗೆ ಕಷ್ಟಪಟ್ಟು ವ್ಯಾಸಂಗ ಮಾಡಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಪ್ರೌಢಶಾಲೆ ಮುಖ್ಯ ಶಿಕ್ಷಕರಾದ , ಕೆಜಿ ಪ್ರಕಾಶ್ ಮೂರ್ತಿ ಶಿಕ್ಷಕರು, ಗಂಗಮ್ಮ , ಶಿವಕುಮಾರ್, ರವೀಶ್ ಉಪಸ್ಥಿತರಿದ್ದರು

## ಒಂದನೇ ಪುಟದಿಂದ..

## ಬರ ಘೋಷಣೆಗೆ ಚಲೋ ಹೊಲ ಗದ್ದೆ ಧರಣಿ ಆರಂಭ:

# ಸಾಲಮನ್ನಾ ಮಾಡಲು ಅಶೋಕ ಆಗ್ರಹ!

ಮಳೆ ಬಂದರೂ ಪ್ರಯೋಜನವಿಲ್ಲ. ಆದರೆ ಕಾಂಗ್ರೆಸ್ ಸರ್ಕಾರ ಬರಗಾಲ ಘೋಷಣೆ ಮಾಡದೆ ತಡ ಮಾಡುತ್ತಿದೆ. ಆದಾಯ ಕಡಿಮೆ ಇರುವುದರಿಂದ ಬರ ಘೋಷಣೆ ಮಾಡಿದರೆ ಕೂಡಲೇ ಪರಿಹಾರ ನೀಡಬೇಕಾಗುತ್ತದೆ ಎಂದು ಆರ್ಥಿಕ ಇಲಾಖೆ ಎಚ್ಚರಿಕೆ ನೀಡಿದೆ. ಬಳ್ಳಾರಿ ತಾಲೂಕಿನಲ್ಲಿ 14.56%, ಕುರುಗೋಡುವಿನಲ್ಲಿ 5.32%, ಸಿರಗುಪ್ಪದಲ್ಲಿ 52.79%, ಸಂಡೂರಿನಲ್ಲಿ 67.33%, ಕಂಪ್ಲಿಯಲ್ಲಿ 34.91% ರಷ್ಟು ಬಿತ್ತನೆಯಾಗಿದೆ. ಒಟ್ಟಾಗಿ ಬಳ್ಳಾರಿಯಲ್ಲಿ 38% ಬಿತ್ತನೆ ನಡೆದಿದೆ ಎಂದು ಹೇಳಿದರು.

ನಾನು ಇಲ್ಲಿಗೆ ಭೇಟಿ ನೀಡಿದ ಬಳಿಕ ಅಧಿಕಾರಿಗಳು ಬಂದಿದ್ದಾರೆ ಎಂದು ರೈತರು ದೂರಿದ್ದಾರೆ. ತುಂಗಭದ್ರಾ ಜಲಾಶಯದಲ್ಲಿ ಈಗ 36 ಟಿಎಂಸಿ ನೀರಿದ್ದರೂ ಅದನ್ನು ಹರಿಸಿಲ್ಲ. ಬಿಜೆಪಿ ಅವಧಿಯಲ್ಲಿ 26 ಟಿಎಂಸಿ ನೀರಿದ್ದಾಗಲೇ ಬೆಳೆಗಾಗಿ ನೀರು ಹರಿಸಲಾಗಿತ್ತು. ಆದ್ದರಿಂದ ಬಿಜೆಪಿಯ ಎಲ್ಲ ಮುಖಂಡರು ಆಂಜನೇಯ ದೇವಾಲಯದಿಂದ ಜಲಾಶಯಕ್ಕೆ ಪಾದಯಾತ್ರೆ ಹೋಗಲಿದ್ದೇವೆ ಎಂದರು.

ಡಿ.ಕೆ.ಶಿವಕುಮಾರ್ ಸಿಎಂ ಆದ ಬಳಿಕ ಹೊಲಗಳು, ಖಜಾನೆ ಹಾಗೂ ಜಲಾಶಯಗಳು ಖಾಲಿಖಾಲಿಯಾಗಿವೆ. ಆದರೆ ಇವರು ಮಾತ್ರ ದೆಹಲಿಯಲ್ಲಿ ಜಾಲಿ ಜಾಲಿ ಮಾಡುತ್ತಿದ್ದಾರೆ. ಸಿದ್ದರಾಮಯ್ಯನವರ ನಂತರ ಅವರು ಬಂದಾಗ ಹೊಸ ಸುಧಾರಣೆಯಾಗಲಿದೆ ಎಂದುಕೊಂಡಿದ್ದೆವು. ಆದರೆ ಇನ್ನೂ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಯಾವುದಕ್ಕೂ ಸಚಿವರು ಬಂದಿಲ್ಲ. ಬರ ಘೋಷಣೆ ಮಾಡದೆ ಕೇಂದ್ರ ಸರ್ಕಾರಕ್ಕೆ 10,000 ಕೋಟಿ ರೂ. ಗೆ ಬೇಡಿಕೆ ಇಡಲಾಗಿದೆ. ಮೊದಲು ಬರ ಅಧ್ಯಯನ ಮಾಡಿ ವರದಿ ರೂಪಿಸಿ, ಕೇಂದ್ರ- ಕ್ಕೆ ಕಳುಹಿಸಬೇಕು. ನಂತರ ಅಧಿಕಾರಿಗಳನ್ನು ಕಳುಹಿಸಿ ಅಧ್ಯಯನ ಮಾಡಿ ಎಲ್ಲ ರಾಜ್ಯಗಳಿಗೆ ಒಟ್ಟಾಗಿ ಪರಿಹಾರ ನೀಡಲಾಗುತ್ತದೆ. ಈ ಪ್ರಕ್ರಿಯೆಯ ಬಗ್ಗೆ ಅರಿವಿದ್ದರೂ ಕಾಂಗ್ರೆಸ್ ಸರ್ಕಾರ ಕ್ರಮ ವಹಿಸಿಲ್ಲ. ಬರ ಘೋಷಣೆ ಮಾಡಿದರೆ ಮಾತ್ರ ವಿಮೆ ಕಂಪನಿಗಳು ಮುಂದೆ ಬರುತ್ತವೆ ಎಂದರು. ವಿಬಿ ಜಿ ರಾಮ್ ಜೀ ಯೋಜನೆಯಡಿ ರೈತರಿಗೆ ಉದ್ಯೋಗ ಕೊಡಬಹುದು. ಅದನ್ನು ಮಾಡದೇ ಇರುವುದರಿಂದ ಅನೇಕರು ಗೊಳೆ ಹೋಗುತ್ತಿದ್ದಾರೆ. ತುಂಗಭದ್ರಾ ಜಲಾಶಯದ ಗೇಟ್ ಹಾಳಾದಾಗ ಮೂರು ಬಾರಿ ಬಂದು, ಗುತ್ತಿಗೆದಾರರಿಗೆ ಹಣ ಬಿಡುಗ- ಡೆ ಮಾಡಿಸಿದ್ದೆ. ಬೇರೆ ರಾಜ್ಯಕ್ಕೆ ನೀರು ಹರಿಸುವುದರ ವಿರುದ್ಧ ಪ್ರತಿಭಟಿಸುತ್ತೇವೆ ಎಂದರು. ಯಾವುದೇ ಕ್ರಮ ವಹಿಸದ ಸಿಎಂ ಡಿ.ಕೆ.ಶಿವಕುಮಾರ್ ಬೆಳೆ ಬೆಳೆಯಬೇಡಿ ಕರೆ ನೀಡಿದ್ದರು. ಇದಕ್ಕೆ ಪರ್ಯಾಯವಾದ ಕ್ರಮವನ್ನೂ ಸೂಚಿಸಿಲ್ಲ. ವಲಸೆ ಹೋಗುವವರನ್ನು ತಡೆದು ಅವರಿಗೆ ಪರಿಹಾರ ನೀಡುವ ಕೆಲಸ ಮಾಡಿಲ್ಲ. ಆದ್ದರಿಂದ ಸರ್ಕಾರ ಕೂಡಲೇ ಬರ ಘೋಷಣೆ ಮಾಡಬೇಕು. ಪ್ರತಿ ತಾಲೂಕಿಗೆ 50 ಕೋಟಿ ರೂ. ನೀಡಿ, ಕುಡಿಯುವ ನೀರು ಹಾಗೂ ಮೇವಿಗೆ ವ್ಯವಸ್ಥೆ ಮಾಡಬೇಕು. ರೈತರು ಎಕರೆಗೆ 30–40 ಸಾವಿರ ರೂ. ಖರ್ಚು ಮಾಡಿದ್ದಾರೆ. ಒಂದು ಕೆಜಿ ಬಿತ್ತನೆ ಬೀಜಕ್ಕೆ 3,000 ರೂ. ಖರ್ಚು ಮಾಡಿದ್ದಾರೆ. ಆದ್ದರಿಂದ ಪ್ರತಿ ಎಕರೆಗೆ 50,000 ರೂ. ನೀಡಬೇಕು. ನಾನು ಕಂದಾಯ ಸಚಿವನಾಗಿದ್ದಾಗ ದುಪ್ಪಟ್ಟು ಪರಿಹಾರ ನೀಡಿದಂತೆಯೇ, ಈಗಲೂ ಸರ್ಕಾರ ದುಪ್ಪಟ್ಟು ಪರಿಹಾರ ನೀಡಬೇಕು ಒತ್ತಾಯಿಸಿದರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಎಸ್‌ಡಿಆರ್‌ಎಫ್, ಎನ್‌ಡಿಆರ್‌ಎಫ್‌ನಡಿ ಎಷ್ಟು ಹಣ ನೀಡಲಾಗಿದೆ ಎಂದು ಕಾಂಗ್ರೆಸ್ ತಿಳಿಸಲಿ. ಹಿಂದಿನ ಯುಪಿಎ ಸರ್ಕಾರಕ್ಕಿಂತಲೂ ಅಧಿಕ ಪರಿಹಾರವನ್ನು ಎನ್‌ಡಿಎ ನೀಡಿದೆ. ನಾನು ಸಚಿವನಾಗಿದ್ದಾಗ ಒಂದು ಎರಡು ತಿಂಗಳಲ್ಲಿ ಪರಿಹಾರ ಕೊಡಿಸಿದ್ದೆ. ಆದರೆ ಕಾಂಗ್ರೆಸ್ ಇನ್ನೂ ಪರಿಹಾರ ಕೊಟ್ಟಿಲ್ಲ. ರೈತರ ಸಾಲಮನ್ನಾ ಬಗ್ಗೆ ಗಮನಹರಿಸುತ್ತೇನೆಂದು ಸಿಎಂ ಹೇಳಿರುವುದರಿಂದ ಕೂಡಲೇ ಸಾಲಮನ್ನಾ ಮಾಡಿದರೆ ಅನುಕೂಲವಾಗುತ್ತದೆ. ಒಬ್ಬ ರೈತರಿಗೆ 1 ಲಕ್ಷ ರೂ. ವರೆಗೆ ಸಾಲಮನ್ನಾ ಮಾಡಬಹುದು ಎಂದರು. ಸಿಎಂ ವಿಜಯ್ ಬರುವುದರಿಂದ 10–15 ಕೋಟಿ ರೂ. ಖರ್ಚಾಗಲಿದೆ. ಅವರು ಇಲ್ಲಿಗೆ ಬಂದು ಮೇಕೆದಾಟು ಯೋಜನೆಗೆ ಹಾಗೂ ಕಾವೇರಿ ನೀರು ಹರಿಸದೇ ಇರುವುದಕ್ಕೆ ವಿರೋಧ ಸೂಚಿಸುತ್ತಾರೆ. ಅವರು ಒಂದು ಹನಿ ನೀರು ಕೂಡ ಬಿಟ್ಟುಕೊಡುವುದಿಲ್ಲ. ಹಿಂದೆ ಜಯಲಲಿತಾ ಜೊತೆ ಸಭೆ ನಡೆದಾಗ ಪ್ರಧಾನಮಂತ್ರಿ ಕೂಡ ಇದ್ದರು. ಆ ರೀತಿ ಇಲ್ಲಿ ಯಾರ ಮಧ್ಯಸ್ಥಿಕೆಯೂ ಇಲ್ಲ. ಕೇವಲ ಪತ್ರಿಕೆಯಲ್ಲಿ ಪ್ರಚಾರ ಪಡೆಯಲು ಈ ರೀತಿ ಮಾಡುತ್ತಿದ್ದಾರೆ ಎಂದರು. ಗಣಿಗಾರಿಕೆಯಿಂದ ಧೂಳು: ರೈತರ ಹೊಲದಲ್ಲಿ ಗಿಡಗಳ ಎಲೆಗಳ ಮೇಲೆ ಧೂಳು ಕೂರುತ್ತಿದೆ. ವೀರಾಪುರ ಕೆರೆಯ ನೀರು ಕಲುಷಿತವಾಗಿದೆ. ಈ ಕುರಿತು ವಿಧಾನಸಭೆ ಅಧಿವೇಶನದಲ್ಲಿ ಚರ್ಚೆ ಮಾಡುತ್ತೇನೆಂದು ಭರವಸೆ ಕೊಟ್ಟಿದ್ದೇನೆ ಎಂದರು.

# ರಾಹುಲ್ ಸಭೆ ಅಂತ್ಯ: ಬೆಂಗಳೂರಿನತ್ತ ಡಿಕೆಶಿ ಸಂಪುಟ ವಿಸ್ತರಣೆ ಪಟ್ಟಿ ಇನ್ನೂ ಅಂತಿಮವಾಗಿಲ್ಲ



ನವದೆಹಲಿ, ಜುಲೈ 30: ಕರ್ನಾಟಕ ಸಚಿವ ಸಂಪುಟ ವಿಸ್ತರಣೆ ಕುರಿತು ಕಾಂಗ್ರೆಸ್ ಹೈಕಮಾಂಡ್ ಮಟ್ಟದಲ್ಲಿ ನಡೆದ ಮಹತ್ವದ ಸಭೆ ಗುರುವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಲ್ಲಿ ನಡೆಯಿತು. ಸಭೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್, ಕರ್ನಾಟಕ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ, ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಹಾಗೂ ಮಲ್ಲಿಕಾರ್ಜುನ ಖರ್ಗೆ ಭಾಗವಹಿಸಿ ಸಚಿವ ಸಂಪುಟ ವಿಸ್ತರಣೆ ಕುರಿತಂತೆ ಸುದೀರ್ಘ ಚರ್ಚೆ ನಡೆಸಿದರು.

ಸಭೆಯಲ್ಲಿ ನೂತನ ಸಚಿವರ ಆಯ್ಕೆ, ಪ್ರಾದೇಶಿಕ ಮತ್ತು ಸಾಮಾಜಿಕ ಸಮತೋಲನ ಸೇರಿದಂತೆ ವಿವಿಧ ರಾಜಕೀಯ ಅಂಶಗಳ ಕುರಿತು ಸಮಾಲೋಚನೆ ನಡೆಸಲಾಗಿದೆ ಎಂದು ತಿಳಿದುಬಂದಿದೆ. ಆದರೆ ಸಚಿವರ ಅಂತಿಮ ಪಟ್ಟಿಯನ್ನು ಇನ್ನೂ ಅಧಿಕೃತವಾಗಿ ಪ್ರಕಟಿಸಲಾಗಿಲ್ಲ.

ಸಭೆ ಮುಕ್ತಾಯಗೊಂಡ ಬಳಿಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಾಲ್ಕು ದಿನಗಳ ದೆಹಲಿ ಪ್ರವಾಸವನ್ನು ಮುಗಿಸಿ ಗುರುವಾರ ರಾತ್ರಿ ಬೆಂಗಳೂರಿಗೆ ಮರಳಲಿದ್ದಾರೆ. ಕಳೆದ ಕೆಲವು ದಿನಗಳಿಂದ ರಾಜ್ಯ ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದಂತೆ ಅವರು ದೆಹಲಿಯಲ್ಲೇ ತಂಗಿ ಹೈಕಮಾಂಡ್ ನಾಯಕರೊಂದಿಗೆ ನಿರಂತರ ಚರ್ಚೆ ನಡೆಸುತ್ತಿದ್ದರು.

ಮೂಲಗಳ ಪ್ರಕಾರ, ರಾಜ್ಯ ನಾಯಕರ ಸಭೆಯ ಬಳಿಕ ರಾಹುಲ್ ಗಾಂಧಿ ಅವರು ಮಲ್ಲಿಕಾರ್ಜುನ ಖರ್ಗೆ, ಕೆ.ಸಿ. ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೆವಾಲ ಅವರೊಂದಿಗೆ ಮತ್ತೊಂದು ಸುತ್ತಿನ ಮಾತುಕತೆ ನಡೆಸಿದ್ದಾರೆ. ಈ ಸಭೆಯಲ್ಲಿ ಸಚಿವರ ಪಟ್ಟಿಗೆ ಅಂತಿಮ ರೂಪ ನೀಡುವ ಪ್ರಕ್ರಿಯೆ ನಡೆಯುತ್ತಿದ್ದು, ಭಾನುವಾರ ರಾತ್ರಿ ಅಂತಿಮ ಪಟ್ಟಿಗೆ ಒಪ್ಪಿಗೆ ದೊರೆಯುವ ಸಾಧ್ಯತೆ ಇದೆ. ಇನ್ನೊಂದೆಡೆ, ಕೆ.ಸಿ. ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೆವಾಲ ಅವರು ಅಂತಿಮ ಪಟ್ಟಿಯೊಂದಿಗೆ ಭಾನುವಾರ ಬೆಂಗಳೂರಿಗೆ ಆಗಮಿಸುವ ಸಾಧ್ಯತೆಯೂ ಇದೆ ಎನ್ನಲಾಗಿದೆ.

# ‘ಕ್ಷಮೆಯಾಚಿಸಿ ರಾಜೀನಾಮೆ ನೀಡಿ’; ಖರ್ಗೆ ವಾಗ್ದಾಳಿ

ಖರ್ಗೆ ಕೇಳಿದರು.

“ಹಳ್ಳಿಗಳಿಂದ ಮತ್ತು ಇತರ ರಾಜ್ಯಗಳಿಂದ ಬಂದ ಮಕ್ಕಳ ಮೇಲೆ ಅವರು ಪೆಲೆಟ್ ಗನ್‌ಗಳಿಂದ ಗುಂಡು ಹಾರಿಸುತ್ತಿದ್ದಾರೆ. ಒಬ್ಬರು ಕಣ್ಣು ಕಳೆದುಕೊಂಡಿದ್ದಾರೆ, ಇನ್ನೊಬ್ಬರು ಕಿವಿ ಕಳೆದುಕೊಂಡಿದ್ದಾರೆ, ಮತ್ತೊಬ್ಬರು ಕೈ ಕಳೆದುಕೊಂಡಿದ್ದಾರೆ. ಇದಕ್ಕೆ ಯಾರು ಹೊಣೆ? ಗೃಹ ಸಚಿವರೇ ಇದಕ್ಕೆ ಹೊಣೆ. ಅಮಿತ್ ಶಾ ಮುಚ್ಚಿದ ಬಾಗಿಲಿನ ಹಿಂದಿನಿಂದ ನನ್ನ ಮಾತುಗಳನ್ನು ಕೇಳಿಸಿಕೊಳ್ಳುತ್ತಿರಬಹುದು. ಅವರು ಸದಾ ಮುಚ್ಚಿದ ಕೋಣೆಯಲ್ಲೇ ಅಡಗಿರಲು ಸಾಧ್ಯವಿಲ್ಲ. ಒಂದಲ್ಲ ಒಂದು ದಿನ ನಾವು ನಿಮ್ಮನ್ನು ಹೊರಗೆಳೆಯುತ್ತೇವೆ” ಎಂದು ಖರ್ಗೆ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಅವರನ್ನೂ ಟೀಕಿಸಿದ ಖರ್ಗೆ, “ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯ ಕುರಿತು ಮೋದಿ ಸರ್ಕಾರ ಮಾತನಾಡದಿದ್ದರೆ, ಯುವಜನತೆ ಮತ್ತು ವಿದ್ಯಾರ್ಥಿಗಳು ಅವರಿಗೆ ಮತ್ತೊಮ್ಮೆ ತಕ್ಕ ಪಾಠ ಕಲಿಸಬೇಕು” ಎಂದು ಕರೆ ನೀಡಿದರು. “ಈ ವಿಧೇಯಕದಲ್ಲಿ ಕೇವಲ ಅಂಕಿ-ಅಂಶಗಳನ್ನು ಬದಲಾಯಿಸುತ್ತಾ ಬರಲಾಗಿದೆ. ಇದ-ರಿಂದ ಏನೂ ಆಗುವುದಿಲ್ಲ. ಹೆಚ್ಚಿನ ದಂಡ, ಕಠಿಣ ಶಿಕ್ಷೆ, ವಿಶೇಷ ಕಾರ್ಯಪಡೆ, ಶೀಘ್ರ ಗತಿ ನ್ಯಾಯಾಲಯಗಳಂತಹ ನಿಬಂಧನೆಗಳನ್ನು ನೀವು ಸೇರಿಸಿದ್ದೀರಿ. ಆದರೆ ಇದರಿಂದ ಯಾವುದೇ ವ್ಯತ್ಯಾಸವಾಗುವುದಿಲ್ಲ. ನೀವು ಪರೀಕ್ಷೆಯನ್ನು ಹೇಗೆ ನಡೆಸುತ್ತೀರಿ ಹಾಗೂ ಪ್ರಶ್ನೆ ಪತ್ರಿಕೆ ಸೋರಿಕೆ-ಯಾಗದಂತೆ ಹೇಗೆ ಸಿದ್ಧತೆ ಮಾಡಿಕೊಳ್ಳುತ್ತೀರಿ ಎಂಬುದರ ಮೇಲೆ ಬದಲಾವಣೆ ನಿರ್ಧಾರವಾಗುತ್ತದೆ. ಇಂತಹ ಕಠಿಣ ಕಾನೂನನ್ನು ತರಲು ನಾವು 2024ರಲ್ಲೇ ಆಗ್ರಹಿಸಿದ್ದೆವು. ಆದರೆ ಆಗ ನೀವು ನಮ್ಮ ಮಾತನ್ನು ಒಪ್ಪಿಕೊಳ್ಳಲಿಲ್ಲ” ಎಂದು ಪರೀಕ್ಷಾ ಅಕ್ರಮ ತಡೆ ಕಾಯ್ದೆಯ ಮೇಲಿನ ಚರ್ಚೆಯ ವೇಳೆ ಖರ್ಗೆ ಹೇಳಿದರು.

ಇಡೀ ದೇಶಾದ್ಯಂತ ಇರುವ ಶೈಕ್ಷಣಿಕ ಸಂಸ್ಥೆಗಳ ಮುಖ್ಯಸ್ಥರಾಗಿ ರಾಷ್ಟ್ರೀಯ ಸ್ವಯಂಸೇವಕ ಸಂಘದ ಜೊತೆ ಗುರುತಿಸಿಕೊಂಡಿರುವ ವ್ಯಕ್ತಿಗಳಿದ್ದಾರೆ ಎಂದು ಆರೋಪಿಸಿದ ಖರ್ಗೆ, ಅವರನ್ನು ತಕ್ಷಣವೇ ಹುದ್ದೆಯಿಂದ ವಜಾಗೊಳಿಸುವಂತೆ ಆಗ್ರಹಿಸಿದರು. ಇದು ಮೇಲ್ಮನೆಯಲ್ಲಿ ಭಾರಿ ಗದ್ದಲಕ್ಕೆ ಕಾರಣವಾಯಿತಲ್ಲದೆ, ಬಿಜೆಪಿ ಸಂಸದರು ಮಲ್ಲಿಕಾರ್ಜುನ ಖರ್ಗೆ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

# ರೈತರ ಬೆಳೆ ಸಾಲ ಮನ್ನಾ ಮಾಡುವಂತೆ ಆಗ್ರಹ

## ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಬೃಹತ್ ಪ್ರತಿಭಟನೆ

ಸರ್ಕಲ್ (ಶಾನುಭೋಗ ಸರ್ಕಲ್) ನಿಂದ ಆರಂಭವಾಗಿ, ನಗರಸಭೆ ಮುಂಭಾಗ, ವಾಲ್ಮೀಕಿ ಸರ್ಕಲ್, ಮಾರ್ಕಂಡೇಶ್ವರ ದೇವಸ್ಥಾನ, ಕೆಇಬಿ ಕಚೇರಿ, ಎಪಿಎಂಸಿ ಸರ್ಕಲ್ ಹಾಗೂ ಸಾಯಿಬಾಬಾ ಸರ್ಕಲ್ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಕಾಲ್ನಡಿಗೆ ಜಾಥಾ ನಡೆಸಲಾಯಿತು.

ಜಿಲ್ಲಾಧಿಕಾರಿಗಳ ಕಚೇರಿಗೆ ಆಗಮಿಸಿದ ಪ್ರತಿಭಟನಾಕಾರರು ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಮನವಿಯಲ್ಲಿ ವಿಜಯನಗರ ಜಿಲ್ಲೆಯ ಬರಪೀಡಿತ ತಾಲೂಕುಗಳನ್ನು ಅಧಿಕೃತವಾಗಿ ಘೋಷಿಸುವುದು, ಬೆಳೆ ನಷ್ಟ ಅನುಭವಿಸಿದ ರೈತರಿಗೆ ಪ್ರತಿ ಎಕರೆಗೆ 30,000 ಪರಿಹಾರ ನೀಡುವುದು ಹಾಗೂ ರೈತರ ಕೃಷಿ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕೆಂದು ಆಗ್ರಹಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಅಧ್ಯಕ್ಷ ಸಿ.ಎ. ಗಾಳೆಪ್ಪ, ನಿರಂತರ ಮಳೆ ಕೊರತೆಯಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಸರ್ಕಾರ ತಕ್ಷಣವೇ ಬೆಳೆ ಹಾನಿ ಸಮೀಕ್ಷೆ ನಡೆಸಿ ರೈತರಿಗೆ ಪರಿಹಾರ ವಿತರಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಕಾರ್ಯದರ್ಶಿ ವೆಂಕಟೇಶ್, ತಾಲೂಕು ಅಧ್ಯಕ್ಷರಾದ ಮಾಳಗಿ ಮಂಜು (ಹೊಸಪೇಟೆ), ರಮೇಶ್ (ಹಗರಿಬೊಮ್ಮನಹಳ್ಳಿ), ಸಿ. ರೇಖಾ (ಕೊಟ್ಟೂರು), ಮಲ್ಲಿಕಾರ್ಜುನ (ಕೂಡ್ಲಿಗಿ), ರೂಪ (ಹರಪನಹಳ್ಳಿ), ಕಲಾವತಿ (ಹಡಗಲಿ) ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಹಾಗೂ ನೂರಾರು ರೈತರು ಭಾಗವಹಿಸಿದ್ದರು.

# ಸಮರ್ಪಕ ವಿದ್ಯುತ್ ಪೂರೈಕೆಗೆ ಆಗ್ರಹ ಕೆಇಬಿ ಕಚೇರಿಗೆ ರೈತರ ಮುತ್ತಿಗೆ



ಕೊಟ್ಟೂರು : ತಾಲೂಕಿನ ಹ್ಯಾಳ್ಯಾ ಹಾಗೂ ಬೇವೂರು ಗ್ರಾಮಗಳಿಗೆ ನಿಗದಿತ ವೇಳೆಯಲ್ಲಿ ಸಮರ್ಪಕ ವಿದ್ಯುತ್ ಪೂರೈಕೆ ಮಾಡದಿರುವುದನ್ನು ಖಂಡಿಸಿ, ಎರಡು ಗ್ರಾಮಗಳ ರೈತರು ಹಾಗೂ ಸಾರ್ವಜನಿಕರು ಗುರುವಾರ ಕೆಇಬಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ ರೈತರು, ಕಳೆದ ಕೆಲವು ದಿನಗಳಿಂದ ಗ್ರಾಮಗಳಿಗೆ ನಿಗದಿತ ಸಮಯದಲ್ಲಿ ವಿದ್ಯುತ್ ಪೂರೈಕೆಯಾಗುತ್ತಿಲ್ಲ. ಇದರಿಂದ ರೈತರು, ವಿದ್ಯಾರ್ಥಿಗಳು, ಮಹಿಳೆಯರು ಸೇರಿದಂತೆ ಗ್ರಾಮಸ್ಥರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಆರೋಪಿಸಿದರು.

ಮಳೆ ಕೊರತೆಯಿಂದ ರೈತರು ಈಗಾಗಲೇ ಸಂಕಷ್ಟದಲ್ಲಿದ್ದು, ಅಲ್ಪ ಪ್ರಮಾಣದ ನೀರಾವರಿಯನ್ನು ಅವಲಂಬಿಸಿ ಬಿತ್ತನೆ ಕಾರ್ಯ ನಡೆಸುತ್ತಿದ್ದಾರೆ. ಆದರೆ ಕೃಷಿ ಪಂಪ್‌ಸೆಟ್‌ಗಳಿಗೆ ಅಗತ್ಯವಿರುವ ಸಮಯದಲ್ಲಿ ವಿದ್ಯುತ್ ಲಭ್ಯವಾಗದ ಕಾರಣ ಬೆಳೆಗಳಿಗೆ ಹಾನಿಯಾಗುವ ಆತಂಕ ಎದುರಾಗಿದೆ. ರೈತರಿಗೆ ಸರ್ಕಾರ ಘೋಷಿಸಿರುವಂತೆ ನಿರಂತರ ಏಳು ಗಂಟೆಗಳ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನಾಕಾರರು ಕೆಇಬಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಸಮಸ್ಯೆಯನ್ನು ಕೂಡಲೇ ಬಗೆಹರಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯ ವೇಳೆ ಅಧಿಕಾರಿಗಳೊಂದಿಗೆ ನಡೆದ ಮಾತುಕತೆಯಲ್ಲಿ, ಹ್ಯಾಳ್ಯಾ ಹಾಗೂ ಬೇವೂರು ಗ್ರಾಮಗಳಿಗೆ ನಿಗದಿತ ವೇಳೆಯಲ್ಲಿ ನಿರಂತರ ಏಳು ಗಂಟೆಗಳ ವಿದ್ಯುತ್ ಪೂರೈಕೆ ಮಾಡುವುದಾಗಿ ಕೆಇಬಿ ಅಧಿಕಾರಿಗಳು ಭರವಸೆ ನೀಡಿದರು. ಅಧಿಕಾರಿಗಳ ಭರವಸೆಯ ನಂತರ ರೈತರು ಪ್ರತಿಭಟನೆಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ಬೇವೂರು ಗ್ರಾಮದ ಸಿದ್ಧನಗೌಡ, ನಾಗರಾಜ್, ಭರಲಿಂಗಪ್ಪ ಹಾಗೂ ಹ್ಯಾಳ್ಯಾ ಗ್ರಾಮದ ಬಸವರಾಜ್, ಹೊಳೆಯಾಚೆ ರೇವಣ್ಣ, ಕೋಗಳಿ ಕೊಟ್ರೇಶ್, ಬಸಯ್ಯ ಸೇರಿದಂತೆ ನೂರಾರು ರೈತರು ಮತ್ತು ಸಾರ್ವಜನಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.




# ಹಾವೇರಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಸಾಮಾಜಿಕ ಜಾಲತಾಣ ಜಿಲ್ಲಾ ಸಂಯೋಜಕರಾಗಿ ಡಾ. ಸಂಜಯಗಾಂಧಿ ಸಂಜೀವಣ್ಣನವರ್ ನೇಮಕ



ಬೆಂಗಳೂರು : ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ (ಕೆಪಿಸಿಸಿ) ಕಚೇರಿಯಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ ಹಾವೇರಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿಯ ಸಾಮಾಜಿಕ ಜಾಲತಾಣದ ಜಿಲ್ಲಾ ಸಂಯೋಜಕರಾಗಿ ಡಾ. ಸಂಜಯಗಾಂಧಿ ಪು. ಸಂಜೀವಣ್ಣನವರನ್ನು ನೇಮಕ ಮಾಡಿ ಆದೇಶ ಪತ್ರವನ್ನು ನೀಡಲಾಯಿತು.

ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ ನೇಮಕಾತಿ ಆದೇಶವನ್ನು ನೀಡಿ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಪ್ರಚಾರ ಸಮಿತಿಯ ರಾಜ್ಯ ಉಪಾಧ್ಯಕ್ಷ ವಾಸುದೇವಮೂರ್ತಿ, ಮುಖ್ಯ ಸಂಯೋಜಕ ಎಸ್. ನಾರಾಯಣ್ಣ, ರಾಜ್ಯ ಉಪಾಧ್ಯಕ್ಷ ಡಾ. ಎಲ್. ಹನುಮಂತಯ್ಯ, ಎಂ. ಶಿವಣ್ಣ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು. ನೇಮಕಾತಿ ಬಳಿಕ ಮಾತನಾಡಿದ ಡಾ. ಸಂಜಯಗಾಂಧಿ ಪು. ಸಂಜೀವಣ್ಣನವರ ತಮ್ಮ ಮೇಲೆ ವಿಶ್ವಾಸವಿಟ್ಟು ಜವಾಬ್ದಾರಿ ನೀಡಿದ ಕೆಪಿಸಿಸಿ ಪ್ರಚಾರ ಸಮಿತಿಯ ಅಧ್ಯಕ್ಷ ವಿನಯ್ ಕುಮಾರ್ ಸೊರಕೆ ಅವರಿಗೆ ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

ಜಿಲ್ಲಾ ಕಾಂಗ್ರೆಸ್ ಪಕ್ಷದ ಮುಖಂಡ ಸಂಜೀವ ಕುಮಾರ್ ಎಂ. ನೀರಲಗಿ, ಸಭಾಧ್ಯಕ್ಷ ರುದ್ರಪ್ಪ ಮಾನಪ್ಪ ಲಮಾಣಿ, ಬ್ಯಾಡಗಿ ಕ್ಷೇತ್ರದ ಶಾಸಕ ಬಸವರಾಜ ಶಿವಣ್ಣನವರ, ಮಾಜಿ ಜಿಲ್ಲಾ ಪಂಚಾಯಿತಿ ಅಧ್ಯಕ್ಷ ಕೊಟ್ರೇಶಣ್ಣ ಬಸಗಣ್ಣಿ, ಗ್ರಾಮೀಣ ಘಟಕದ ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷ ಸಿದ್ದಪ್ಪ ಬಾಲಣ್ಣನವರ, ಹಿರಿಯ ಮುಖಂಡ ಮರಿಯಪ್ಪ ನಡುವಿನಮನಿ ಸೇರಿದಂತೆ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಕಾಂಗ್ರೆಸ್ ಪಕ್ಷದ ಎಲ್ಲಾ ಮುಖಂಡರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರಿಗೆ ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿದರು.

ಪಕ್ಷದ ಸಾಮಾನ್ಯ ಕಾರ್ಯಕರ್ತನಾದ ನನ್ನನ್ನು ಗುರುತಿಸಿ ಇಂತಹ ಮಹತ್ವದ ಜವಾಬ್ದಾರಿ ನೀಡಿರುವುದು ಮತ್ತಷ್ಟು ಜವಾಬ್ದಾರಿಯೊಂದಿಗೆ ಕೆಲಸ ಮಾಡಲು ಪ್ರೇರಣೆಯಾಗಿದೆ. ಪಕ್ಷದ ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವುದಾಗಿ ಡಾ. ಸಂಜಯಗಾಂಧಿ ಪು. ಸಂಜೀವಣ್ಣ ತಿಳಿಸಿದರು.

# ಕಲಾಗ್ರಾಮದಲ್ಲಿ ಆಗಸ್ಟ್ 1ರಂದು ಕುವೆಂಪು ಅವರ 'ಶೂದ್ರ ತಪಸ್ವಿ' ನಾಟಕ ಪ್ರದರ್ಶನ




ಬೆಂಗಳೂರು: ಬಿಂಕ ಬಿನ್ನಾಣರು ರಂಗ ತಂಡವು ಇದೇ ದಿ.ಅಗಸ್ಟ 1 ರಂದು ಶನಿವಾರ ಸಂಜೆ 7 ಗಂಟೆಗೆ ಬೆಂಗಳೂರಿನ ಕಲಾಗ್ರಾಮ, ಮಲ್ಲತ್ತಹಳ್ಳಿಯಲ್ಲಿ ರಸಋಷಿ ಕುವೆಂಪು ವಿರಚಿತ ಶೂದ್ರ ತಪಸ್ವಿ ಪೌರಾಣಿಕ ನಾಟಕವನ್ನು ಪ್ರಯೋಗ ಮಾಡುತ್ತಿದೆ. ಶಿವು ಹೊನ್ನಿಗನಹಳ್ಳಿಯವರ ನಿರ್ದೇಶನದಲ್ಲಿ ನಾಟಕ ಅದ್ಭುತವಾಗಿ ಮೂಡಿಬರಲಿದೆ.

ಶೂದ್ರ ತಪಸ್ವಿ ಕನ್ನಡದ ಖ್ಯಾತ ಸಾಹಿತಿ ಮತ್ತು ನಾಟಕಕಾರ ರಾಷ್ಟ್ರಕವಿ ಕುವೆಂಪು ಅವರ ಪ್ರಸಿದ್ಧ ಸಾಮಾಜಿಕ–ತಾತ್ವಿಕ ನಾಟಕವಾಗಿದೆ. ಶೂದ್ರ ತಪಸ್ವಿ ಕೇವಲ ಪೌರಾಣಿಕ ನಾಟಕವಲ್ಲ; ಅದು ಜಾತಿ, ಧರ್ಮ ಮತ್ತು ಮಾನವ ಸಮಾನತೆಯ ಕುರಿತು ಗಂಭೀರ ಪ್ರಶ್ನೆಗಳನ್ನು ಎತ್ತುವ, ಚಿಂತನೆಗೆ ಹಚ್ಚುವ ಶ್ರೇಷ್ಠ ಕನ್ನಡ ನಾಟಕವಾಗಿದೆ.

ಒಂದನೇ ಬ್ರಾಹ್ಮಣನ ಪಾತ್ರದಲ್ಲಿ ಗಣೇಶ್, ಭವಭೂತಿ ರಾಮನ ಪಾತ್ರದಲ್ಲಿ ಶಿವು, ಶಂಬೂಕನ ಪಾತ್ರದಲ್ಲಿ ಪರಮೇಶ್, ಗಂಧರ್ವನ ಪಾತ್ರದಲ್ಲಿ ಕಿಶನ್, ಶೂದ್ರ ಕವಿಯ ಪಾತ್ರದಲ್ಲಿ ನಾಗೇಂದ್ರ, ನೀರಾ ಪಾತ್ರದಲ್ಲಿ ಭೂಮಿಕಾ ರಾವ್, ತಾರಾ ಪಾತ್ರದಲ್ಲಿ ಪೂರ್ವಿಕ ರಾವ್ ಹಾಗೂ ವಿಪಿನ ಪಾತ್ರದಲ್ಲಿ ಪ್ರಿಯಾಂಕ ಬ್ರಾಹ್ಮಣ ಮತ್ತು ಸೂತ್ರಧಾರನ ಪಾತ್ರದಲ್ಲಿ ಶಿವು ಹೊನ್ನಿಗನಹಳ್ಳಿ, ಕುವೆಂಪು ರಾಮನ ಪಾತ್ರದಲ್ಲಿ ನಾಗರಾಜ್ ಪಾಟೀಲ್, ಮೃತ್ಯು ಪಾತ್ರದಲ್ಲಿ ಸುಷ್ಮಾರಾಣಿ ಜಿ, ಭೈರವನ ಪಾತ್ರದಲ್ಲಿ ಅಯ್ಯಣ್ಣ, ಬ್ರಾಹ್ಮಣ ಕುಮಾರನ ಪಾತ್ರದಲ್ಲಿ ರಜತ್ , ವಾಲ್ಮೀಕಿ ರಾಮನ ಪಾತ್ರದಲ್ಲಿ ಹರ್ಷ ಕಾಟವಾ , ಇಂದ್ರನ ಪಾತ್ರದಲ್ಲಿ ಕಿರಣ್ ಹಾಗೂ ನಾರದನ ಪಾತ್ರದಲ್ಲಿ ಮೆಹಬೂಬ್ ಅಭಿನಯಿಸಿದ್ದಾರೆ.

ವಸ್ತ್ರ ವಿನ್ಯಾಸ, ಪ್ರಸಾಧನ ಹಾಗೂ ನಿರ್ಮಾಣದ ಜವಾಬ್ದಾರಿಯನ್ನು ಸೌಮ್ಯ ಹೆಚ್. ಎಸ್. ನಿರ್ವಹಿಸಿದ್ದಾರೆ. ಸಂಗೀತದಲ್ಲಿ ದೇಸಿ ಮೋಹನ್, ಮೇಳ ವಿಭಾಗದಲ್ಲಿ ನಂದನ್ ಎಸ್. ಮತ್ತು ಅನಘ ಕಾರ್ಯನಿರ್ವಹಿಸಿದ್ದಾರೆ. ಬೆಳಕಿನ ವಿನ್ಯಾಸವನ್ನು ಎ. ಕೆ. ಕೃಷ್ಣಯ್ಯ ನಿರ್ವಹಿಸಲಿದ್ದು, ಛಾಯಾಗ್ರಹಣವನ್ನು ಮನೋಜ್, ಪ್ರಚಾರ ಕಲೆಯನ್ನು ನಾಗರಾಜ್ ಪಾಟೀಲ್ ನಿರ್ವಹಿಸಲಿದ್ದಾರೆ. ಕನ್ನಡ ರಂಗಭೂಮಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ ಹವ್ಯಾಸಿ ರಂಗತಂಡಗಳಲ್ಲಿ ಸಕ್ರಿಯವಾಗಿರುವ ಸಂಸ್ಥೆ ಬಿಂಕ ಬಿನ್ನಾಣರು ರಂಗ ತಂಡ. ಶಿವು ಹೊನ್ನಿಗನಹಳ್ಳಿಯವರು ರಂಗ ತಂಡವನ್ನು ಆರಂಭಿಸಿ ಆಸಕ್ತ ಯುವಕರನ್ನು ರಂಗಭೂಮಿಗೆ ಕರೆತಂದು ಅವರಿಗೆ ನಟನೆ, ಪ್ರಸಾಧನ, ವಸ್ತ್ರವಿನ್ಯಾಸ, ರಂಗಸಜ್ಜಿಕೆ, ಸಂಗೀತ, ನಿರ್ದೇಶನ ಸೇರಿದಂತೆ ಎಲ್ಲಾ ವಿಭಾಗಗಳಲ್ಲೂ ಪರಿಣಿತಿ ಪಡೆಯುವಂತೆ ವ್ಯವಸ್ಥೆ ಮಾಡಿದ್ದಾರೆ.

ಬಿಂಕ ಬಿನ್ನಾಣರು ರಂಗ ತಂಡಕ್ಕೆ ಈಗ 11 ವರ್ಷಗಳ ಸಂಭ್ರಮ. ಪ್ರಸ್ತುತ ಬಿಂಕ ಬಿನ್ನಾಣ–ರು ರಂಗ ತಂಡವು ರಸಋಷಿ ಕುವೆಂಪು ವಿರಚಿತ ಶೂದ್ರ ತಪಸ್ವಿ ನಾಟಕವನ್ನು ನಿರ್ಮಿಸಿ ಪ್ರಾಯೋಗಿಸುತ್ತಿದೆ.

ಗಿರೀಶ್ ಕಾರ್ನಾಡ್ ರಚನೆಯ ತಲೆದಂಡ ಹಾಗೂ ಕೃಷ್ಣಶರ್ಮ ವಿರಚಿತ ಸುಯೋಧನ ನಾಟಕಗಳು ಅತಿಹೆಚ್ಚು ಪ್ರಸಿದ್ಧಿ ಪಡೆದಿವೆ. ತಂಡದ ಮುಂದಿನ ಪ್ರಯೋಗ ಸಂತೆಯಲ್ಲಿ ನಿಂತ ಕಬೀರ ನಾಟಕ ಪ್ರಯೋಗಕ್ಕೆ ಸಿದ್ಧತೆ ನಡೆಸುತ್ತಿದೆ.

ಇಲ್ಲಿಯವರೆಗೂ ಬಿಂಕ ಬಿನ್ನಾಣರು ರಂಗ ತಂಡವು ಧೂತ ಘಟೋತ್ಕಚ, ಕರ್ಣಭಾರ, ಮಧ್ಯಮ ವ್ಯಾಯೋಗ, ಊರುಭಂಗ, ಸ್ವಪ್ನ ವಾಸವದತ್ತ, ಕುರುದೊಡ್ಡಿ ಕುರುಕ್ಷೇತ್ರ, ಆಶೀರ್ವಾದ, ಪ್ರಕರ್ಷ, ಮಿಣುಕು, ಚಾಮಣ್ಣನ ಚಿರೋಟಿ, ಅಗ್ನಿಮರ್ಧನ, ಕುಂಟ ಕುಂಟ ಕುರುವತ್ತಿ, ಬೆವರಲ್ಲೇ ಬೆಳಕು ಗುರುಶಿಷ್ಯರು, ಕತ್ತಲೆ ದಾರಿ ದೂರ, ಸ್ವಾತಂತ್ರ್ಯದ ಕಿಡಿಗಳು, ಸುಯೋಧನ, ಗೌರವ ರತ್ನ ಕೌರವ, ತೆರೆಗಳು ತಲೆದಂಡ ನಾಟಕಗಳನ್ನು ಹಾಗೂ ಹಲವಾರು ಬೀದಿ ನಾಟಕಗಳನ್ನು ನಿರ್ಮಿಸಿ ಪ್ರಯೋಗಿಸಿದೆ. ಅಂದು ನಮ್ಮೊಂದಿಗೆ ಮುಖ್ಯ ಅತಿಥಿಗಳಾಗಿ ಹೋರಾಟಗಾರರು, ಚಿಂತಕರು ಶ್ರೀ ವೆಂಕಟಸ್ವಾಮಿ ಗಂಗನಬೀಡು ಹಿರಿಯ ರಂಗಕರ್ಮಿ ಶ್ರೀ ಸಿ. ಎಂ. ತಿಮ್ಮಯ್ಯ, ಹಿರಿಯ ಪತ್ರಕರ್ತರು, ಅಂಕಣಕಾರರು ಆದ ಶ್ರೀ ಸಿ. ವಾಯ್. ಮೆಣಸಿನಕಾಯಿ,
ರಂಗ ಸಂಘಟಕರು ರಂಗಶ್ರೀ ರಂಗಸ್ವಾಮಿ, ರಂಗ ಪೋಷಕರು ಶ್ರೀ ಮಾಗಡಿ ಗಿರೀಶ್, ಸಹಾಯಕ ನಿರ್ದೇಶಕರು ಚಂದ್ರಶೇಖರ್ ಆರ್., ಶ್ರೀಮತಿ ನೀಲಮ್ಮ ಜೊತೆಯಾಗಲಿದ್ದಾರೆ.

# ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಖಂಡನೆ: ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳಿಗೆ ಮೇಣದಬತ್ತಿ ಬೆಳಗಿ ಶ್ರದ್ಧಾಂಜಲಿ



ಹುಣಸೂರು : ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ಹಿನ್ನೆಲೆಯಲ್ಲಿ ದೇಶದ ವಿವಿಧ ಭಾಗಗಳಲ್ಲಿ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳ ಸ್ಮರಣಾರ್ಥ ನಗರದ ಟೌನ್‌ಹಾಲ್ ಸಮೀಪದ ಅಂಬೇಡ್ಕರ್ ವೃತ್ತದಲ್ಲಿ ಪ್ರಗತಿಪರ ಸಂಘಟನೆಗಳ ಮುಖಂಡರು ಮೇಣದಬತ್ತಿ ಬೆಳಗಿ ಶ್ರದ್ಧಾಂಜಲಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಗತಿಪರ ಸಂಘಟನೆಗಳ ಮುಖಂಡರು, ನೀಟ್ ಪ್ರಶ್ನೆ ಪತ್ರಿ–ಕೆ ಸೋರಿಕೆ ಪ್ರಕರಣವು ದೇಶದ ಶಿಕ್ಷಣ ವ್ಯವಸ್ಥೆಯ ಮೇಲಿನ ವಿದ್ಯಾರ್ಥಿಗಳ ನಂಬಿಕೆಗೆ ದೊಡ್ಡ ಹೊಡೆತ ನೀಡಿದೆ ಎಂದು ಅಭಿಪ್ರಾಯಪಟ್ಟರು.

ಪ್ರಕರಣದ ಬಳಿಕ ಹಲವಾರು ವಿದ್ಯಾರ್ಥಿಗಳು ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದು, ಪ್ರತಿಭಟನೆಗಳು ನಡೆದರೂ ಕೇಂದ್ರ ಸರ್ಕಾರ ಆರಂಭದಲ್ಲಿ ಅಗತ್ಯ ಕ್ರಮ ಕೈಗೊಳ್ಳಲಿಲ್ಲ ಎಂದು ಆರೋಪಿಸಿದರು.

ಶಿಕ್ಷಣ ಕ್ಷೇತ್ರದಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಖಚಿತಪಡಿಸುವ ಅಗತ್ಯವಿದ್ದು, ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಯಾವುದೇ ರೀತಿಯ ನಿರ್ಲಕ್ಷ್ಯ ಸಲ್ಲದು ಎಂದು ಅವರು ಒತ್ತಾಯಿಸಿದರು. ವಿದ್ಯಾರ್ಥಿಗಳ ಹೋರಾಟದ ಹಿನ್ನೆಲೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿರುವುದು ವಿದ್ಯಾರ್ಥಿ ಸಮುದಾಯದ ಹೋರಾಟಕ್ಕೆ ದೊರೆತ ಮೊದಲ ಜಯವಾಗಿದೆ ಎಂದು ಮುಖಂಡರು ಹೇಳಿದರು.

ದೇಶಾದ್ಯಂತ ವಿದ್ಯಾರ್ಥಿಗಳು ಹಾಗೂ ಯುವಜನತೆ ತಮ್ಮ ಹಕ್ಕುಗಳ ಕುರಿತು ಜಾಗೃತರಾಗಿದ್ದು, ಶಿಕ್ಷಣ ಕ್ಷೇತ್ರದಲ್ಲಿನ ಭ್ರಷ್ಟಾಚಾರ ಮತ್ತು ನಿರುದ್ಯೋಗದಂತಹ ಸಮಸ್ಯೆಗಳ ವಿರುದ್ಧ ಪ್ರಜಾಪ್ರಭುತ್ವದ ಮಾರ್ಗದಲ್ಲಿ ಹೋರಾಟ ಮುಂದುವರಿಸಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ಹುಣಸೂರಿನ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ, ಮೃತ ವಿದ್ಯಾರ್ಥಿಗಳಿಗೆ ಮೌನಾಚರಣೆ ಮೂಲಕ ಗೌರವ ನಮನ ಸಲ್ಲಿಸಿದರು.

# ಹುಳಿಯಾರು ಮುಖ್ಯರಸ್ತೆ ಕತ್ತಲಲ್ಲಿ: ಡಿವೈಡರ್ ದೀಪ ದುರಸ್ತಿಗೆ ಒತ್ತಾಯ ಮನವಿ ಸ್ಪಂದಿಸದಿದ್ದರೆ ಪ್ರತಿಭಟನೆ ಎಚ್ಚರಿಕೆ

ಹುಳಿಯಾರು :ಪಟ್ಟಣದ ಅತ್ಯಂತ ಪ್ರಮುಖ ಹಾಗೂ ಜನದಟ್ಟಣೆ ಇರುವ ಬಿ.ಹೆಚ್. ರಸ್ತೆಯ ಡಿವೈಡರ್‌ನಲ್ಲಿ ಅಳವಡಿಸಿರುವ ವಿದ್ಯುತ್ ದೀಪಗಳು ಕಳೆದ ಹಲವು ದಿನಗಳಿಂದ ಉರಿಯದೆ ಕತ್ತಲಾವರಿಸಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಮತ್ತು ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸುವಂತೆ ಒತ್ತಾಯಿಸಿ ಇಮ್ರಾಝ್ ಹಾಗೂ ಗೆಳೆಯರ ಬಳಗವು ಹುಳಿಯಾರು ಪೊಲೀಸ್ ಠಾಣೆ–ಯ ಆರಕ್ಷಕ ಉಪನಿರೀಕ್ಷಕರಿಗೆ ಮನವಿ ಸಲ್ಲಿಸಿತು.

ಪೊಲೀಸ್ ಠಾಣೆಯ ಮುಂಭಾಗದಿಂದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವೃತ್ತ ಹಾಗೂ ರಾಮ್ ಗೋಪಾಲ್ ಸರ್ಕಲ್‌ವರೆಗೆ ಅಳವಡಿಸಿರುವ ಡಿವೈಡರ್ ದೀಪಗಳು ಕಾರ್ಯನಿರ್ವಹಿಸದ ಕಾರಣ ರಾತ್ರಿ ವೇಳೆ ಸಂಪೂರ್ಣ ರಸ್ತೆ ಕತ್ತಲಲ್ಲಿ ಮುಳುಗುತ್ತಿದೆ. ಇದರಿಂದ ಸಾರ್ವಜನಿಕರು, ಪಾದಚಾರಿಗಳು ಹಾಗೂ ವಾಹನ ಸವಾರರು ಆತಂಕದಲ್ಲಿ ಸಂಚರಿಸುವಂತಾಗಿದೆ. ಈ ಕುರಿತು ಪಟ್ಟಣ ಪಂಚಾಯಿತಿಯನ್ನು ಸಂಪರ್ಕಿಸಿದಾಗ, "ರಸ್ತೆ ಹಾಗೂ ಡಿವೈಡರ್ ದೀಪಗಳ ನಿರ್ವಹಣೆಯನ್ನು ಎನ್‌ಹೆಚ್‌ಎಐ ಇನ್ನೂ ಪಟ್ಟಣ ಪಂಚಾಯಿತಿಗೆ ಹಸ್ತಾಂತರಿಸಿಲ್ಲ" ಎಂಬ ಉತ್ತರ ನೀಡಲಾಗುತ್ತಿದೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ. ಕತ್ತಲಿನ ಪರಿಣಾಮ ರಸ್ತೆಯಲ್ಲಿರುವ ಹಂಪ್ಸ್‌ಗಳು ಸ್ಪಷ್ಟವಾಗಿ ಕಾಣಿಸದ ಕಾರಣ ದ್ವಿಚಕ್ರ ವಾಹನ ಸವಾರರು ಅಪಘಾತಕ್ಕೀಡಾಗುತ್ತಿರುವ ಘಟನೆಗಳು ಹೆಚ್ಚುತ್ತಿವೆ. ಅಲ್ಲದೆ ಪಟ್ಟಣದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಿರುವುದರಿಂದ ರಾತ್ರಿ ವೇಳೆಯಲ್ಲಿ ದಿಢೀರ್ ರಸ್ತೆಗೆ ಅಡ್ಡ ಬಂದು ಅಪಘಾತ ಸಂಭವಿಸುವ ಸಾಧ್ಯತೆ ಇದೆ ಎಂದು ಸಾರ್ವಜನಿಕರು ಆತಂಕ ವ್ಯಕ್ತಪಡಿಸಿದ್ದಾರೆ.



ಮುಖ್ಯರಸ್ತೆಯಲ್ಲಿ ಸಮರ್ಪಕ ಸಿಸಿಟಿವಿ ಕ್ಯಾಮೆರಾಗಳ ಕೊರತೆ ಹಾಗೂ ಕತ್ತಲ ವಾತಾವರಣದಿಂದ ಕಳ್ಳತನ ಸೇರಿದಂತೆ ಅಕ್ರಮ ಚಟುವಟಿಕೆಗಳಿಗೆ ಅವಕಾಶ ಹೆಚ್ಚಾಗುವ ಭೀತಿಯೂ ವ್ಯಕ್ತವಾಗಿದೆ. ವಿಶೇಷವಾಗಿ ಮಹಿಳೆಯರು, ಮಕ್ಕಳು ಹಾಗೂ ವೃದ್ಧರು ರಾತ್ರಿ ವೇಳೆ ಈ ರಸ್ತೆಯಲ್ಲಿ ಸಂಚರಿಸಲು ಅಭದ್ರತೆ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಈ ಹಿನ್ನೆಲೆಯಲ್ಲಿ ತುಮಕೂರು ಜಿಲ್ಲಾಧಿಕಾರಿಗಳು ಹಾಗೂ ಎನ್‌ಎಚ್–4 ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರು ತಕ್ಷಣ ಮಧ್ಯಪ್ರವೇಶಿಸಿ ಡಿವೈಡರ್ ವಿದ್ಯುತ್ ದೀಪಗಳನ್ನು ಕಾರ್ಯಾರಂಭಗೊಳಿಸಿ ಸಾರ್ವಜನಿಕರ ಸುರಕ್ಷತೆಯನ್ನು ಖಚಿತಪಡಿಸಬೇಕು ಎಂದು ಮನವಿ ಮಾಡಲಾಗಿದೆ. ಮನವಿ ಸಲ್ಲಿಸುವ ವೇಳೆ ತಬ್ರೈಸ್ ಖಾನ್, ಇಮ್ರಾಜ್, ಜೀವನ್, ಸೈಯದ್ ಮತಿನ್, ಮುದಸ್ಸೀರ್ ಸೇರಿದಂತೆ ಸ್ಥಳೀಯ ಮುಖಂಡರು ಉಪಸ್ಥಿತರಿದ್ದು, ಸಮಸ್ಯೆಗೆ ಶೀಘ್ರ ಪರಿಹಾರ ದೊರೆಯದಿದ್ದರೆ ಹೋರಾಟದ ಹಾದಿ ಹಿಡಿಯುವುದಾಗಿ ಎಚ್ಚರಿಕೆ ನೀಡಿದ್ದಾರೆ.

# ಪಂಚಗ್ರಹ ಹಿರೇಮಠದಲ್ಲಿ ಭವ್ಯ ಗುರು ಪೂರ್ಣಿಮೆ: ರಕ್ತದಾನ ಹಾಗೂ ಬೃಹತ್ ಆರೋಗ್ಯ ತಪಾಸಣಾ ಶಿಬಿರ





ನವಲಗುಂದ: ಇಲ್ಲಿನ ಶ್ರೀ ಸಂಸ್ಥಾನ ಪಂಚಗ್ರಹ ಹಿರೇಮಠದಲ್ಲಿ ಗುರು ಪೂರ್ಣಿಮೆಯ ಅಂಗವಾಗಿ ಪೂಜ್ಯ ಗುರುಗಳ ದಿವ್ಯ ಸನ್ನಿಧಿಯಲ್ಲಿ ಭಕ್ತಿಪೂರ್ವಕ ಪಾದಪೂಜೆ ಹಾಗೂ ಸಾರ್ವಜನಿಕರ ಹಿತದೃಷ್ಟಿಯಿಂದ ಹಮ್ಮಿಕೊಳ್ಳಲಾಗಿದ್ದ ಬೃಹತ್ ರಕ್ತದಾನ ಮತ್ತು ಉಚಿತ ಆರೋಗ್ಯ ತಪಾಸಣಾ ಶಿಬಿರವು ಅತ್ಯಂತ ಯಶಸ್ವಿಯಾಗಿ ಜರುಗಿತು.

ಶ್ರೀ ಷ.ಬ್ರ. ಸಿದ್ಧೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಶ್ರೀ ಷ.ಬ್ರ. ಇಮ್ಮಡಿ ಸಿದ್ಧೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳವರ ದಿವ್ಯ ನೇತೃತ್ವ ಮತ್ತು ಆಶೀರ್ವಾದದೊಂದಿಗೆ ಈ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಇದು ಭಾವೈಕ್ಯತೆಯ ಸಂಕೇತಕ್ಕೇ ಸಾಕ್ಷಿಯಾಯಿತು..

ಭಕ್ತಿಪೂರ್ವಕ ಪಾದಪೂಜೆ ಹಾಗೂ ಗುರು ದರ್ಶನ

ಗುರು ಪೂರ್ಣಿಮೆಯ ನಿಮಿತ್ತ ಮುಂಜಾನೆಯಿಂದಲೇ ಮಠದಲ್ಲಿ ಧಾರ್ಮಿಕ ವಿಧಿ-ವಿಧಾನಗಳು ಜರುಗಿದವು. ಕೇಸರಿ ವರ್ಣದ ಸಾಂಪ್ರದಾಯಿಕ ಧರ್ಮ ವಸ್ತ್ರ ಹಾಗೂ ಭವ್ಯವಾದ ಶಿರಸ್ತ್ರಾಣವನ್ನು (ರುಮಾಲು) ಧರಿಸಿದ್ದ ಪೂಜ್ಯ ಗುರುಗಳ ದಿವ್ಯ ರೂಪವು ಭಕ್ತರಲ್ಲಿ ಆಧ್ಯಾತ್ಮಿಕ ಚೈತನ್ಯವನ್ನು ತುಂಬಿತು. ಮುಖದಲ್ಲಿ ಜ್ಞಾನದ ತೇಜಸ್ಸು ಹಾಗೂ ಗಾಂಭೀರ್ಯವನ್ನು ಸೂಸುತ್ತಾ ಆಸನದಲ್ಲಿ ಕುಳಿತಿದ್ದ ಶ್ರೀ ಷ. ಬ್ರ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಜಿಯವರಿಗೆ ಭಕ್ತಾದಿಗಳು ಸುಗಂಧ ಭರಿತ ಪುಷ್ಪಮಾಲೆಗಳು ಮತ್ತು ಶಾಲುಗಳನ್ನು ಅರ್ಪಿಸಿ ಭಕ್ತಿಯ ಸೇವೆಯನ್ನು ಸಮರ್ಪಿಸಿದರು. ಅಪಾರ ಸಂ-ಖ್ಯೆಯ ಭಕ್ತರು ಒಟ್ಟಾಗಿ ಸೇರಿ ಪೂಜ್ಯರ ಪಾದಪೂಜೆ ನೆರವೇರಿಸಿ, ಮಂಗಳಾರತಿ ಎತ್ತಿ ಕೃತಜ್ಞತೆ ಸಲ್ಲಿಸಿ ಪೂಜ್ಯರ ಕೃಪೆಗೆ ಪಾತ್ರರಾದರು...

ಜನಸೇವೆಯೇ ಜನಾರ್ದನ ಸೇವೆ – ಬೃಹತ್ ಶಿಬಿರಗಳು

ಗುರು ಪೂರ್ಣಿಮೆಯ ಅಂಗವಾಗಿ ಮಠದ ವತಿಯಿಂದ ರೋಟರಿ ರಕ್ತ ಭಂಡಾರ ಧಾರವಾಡ, ಎಂ. ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ ಹಾಗೂ ಹುಬ್ಬಳ್ಳಿಯ ಬಾಲಾಜಿ ನರರೋಗ ಹಾಗೂ ಕೀಲುರೋಗ ವಿಜ್ಞಾನ ಸಂಸ್ಥೆಗಳ ಜಂಟಿ ಸಹಯೋಗದೊಂದಿಗೆ ಬೃಹತ್ ಶಿಬಿರಗಳನ್ನು ಆಯೋಜಿಸಲಾಗಿತ್ತು. ಮುಂಜಾನೆ 10:00 ಗಂಟೆಯಿಂದ ಸಾಯಂಕಾಲ 06:00 ಗಂಟೆಯವರೆಗೆ ಸಾರ್ವಜನಿಕರಿಗಾಗಿ ಉಚಿತ ಆರೋಗ್ಯ ತಪಾಸಣೆ ನಡೆಯಿತು.

ನೂರಾರು ನಾಗರಿಕರು ಈ ಉಚಿತ ಕಣ್ಣಿನ ತಪಾಸಣೆ, ನರರೋಗ ಹಾಗೂ ಕೀಲುರೋಗ ತಪಾಸಣೆಯ ಸದುಪಯೋಗ ಪಡೆದುಕೊಂಡರು.

ಇದೇ ಸಂದರ್ಭದಲ್ಲಿ ಯುವಕರು ಹಾಗೂ ಭಕ್ತಾದಿಗಳು ಸ್ವಪ್ರೇರಣೆಯಿಂದ ರಕ್ತದಾನ ಮಾಡಿ ಮಾನವೀಯತೆ ಮೆರೆದರು.

ಈ ಶುಭ ಸಂದರ್ಭದಲ್ಲಿ ಗುರುಗಳು ಭಕ್ತರಿಗೆ ಆಶೀರ್ವಚನ ನೀಡಿ, "ಜೀವನದ ಅಜ್ಞಾನದ ಕತ್ತಲನ್ನು ಕಳೆದು ಜ್ಞಾನದ ಬೆಳಕಿನತ್ತ ಮುನ್ನಡೆಸುವವನೇ ಗುರು. ಪ್ರತಿಯೊಬ್ಬರೂ ಧರ್ಮದ ಹಾದಿಯಲ್ಲಿ ನಡೆಯುವುದರ ಜೊತೆಗೆ ರಕ್ತದಾನದಂತಹ ಸಾಮಾಜಿಕ ಸೇವೆಗಳಲ್ಲಿ ತೊಡಗಿಸಿಕೊಂಡು ಜೀವ ಉಳಿಸುವ ಕಾರ್ಯ ಮಾಡಬೇಕು ಎಂದು ಬೋಧಿಸಿದರು, ಕಾರ್ಯಕ್ರಮದಲ್ಲಿ ನೆರೆದಿದ್ದ ಭಕ್ತರಿಗೆ ಪ್ರಸಾದದ ವ್ಯವಸ್ಥೆಯನ್ನು ಏರ್ಪಡಿಸಲಾಗಿತ್ತು

> ತ್ರಿವಿಧ ದಾಸೋಹದ ಮೂಲಕ ನಾಡಿನ ಹಸಿವು, ಅಜ್ಞಾನ ಮತ್ತು ಬಡತನವನ್ನು ನೀಗಿಸುತ್ತಿರುವ ಕರುಣೆಯ ಮಡಿಲುಗಳೇ ನಮ್ಮ ಮಠಗಳು. ಇಲ್ಲಿ ಅನ್ನದಾಸೋಹದ ಜೊತೆಗೆ ಜ್ಞಾನದಾಸೋಹ ಹಾಗೂ ಅಕ್ಷರದಾಸೋಹ ನಿರಂತರವಾಗಿ ಹರಿಯುತ್ತದೆ. ಜಾತಿ, ಮತ, ಭೇದವಿಲ್ಲದೆ ಎಲ್ಲರನ್ನೂ ಒಂದೇ ಭಾವದಿಂದ ಕಾಣುವ ಇಂತಹ ಜನಪರ ಕೆಲಸಗಳಿಂದ ಸಮಾಜದಲ್ಲಿ ಶಾಂತಿ ಮತ್ತು ಸಾಮರಸ್ಯ ಹೆಚ್ಚುತ್ತದೆ...
> ಶ್ರೀ ಇಮ್ಮಡಿ ಷ.ಬ್ರ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು,
> ಪಂಚಗ್ರಹ ಹಿರೇಮಠ, ನವಲಗುಂದ

> ಪವಿತ್ರ ಗುರು ಪೂರ್ಣಿಮೆಯ ದಿನದಂದು, ಶ್ರೀ ಬಾಬು ಹಳ್ಳದ ಅವರು ಪೂಜ್ಯ ಗುರುಗಳ ದಿವ್ಯ ಸನ್ನಿಧಿಯಲ್ಲಿ ಶ್ರೀ ಗುರು ರಾಯರ ಭಕ್ತಿ ಗೀತೆಯನ್ನು ಗಾಯನ ಮಾಡಿದರು. ತಮ್ಮ ಸುಂದರ ಕಂಠದ ಮೂಲಕ ಗುರುಗಳ ಅಪಾರ ಮಹಿಮೆ ಹಾಗೂ ಮಹತ್ವದ ಸಾರವನ್ನು ಪೂಜ್ಯರ ಮುಂದೆ ಪ್ರಸ್ತುತಪಡಿಸಿ, ನೆರೆದಿದ್ದ ಭಕ್ತ ಸಮೂಹವನ್ನು ಮಂತ್ರಮುಗ್ಧರನ್ನಾಗಿಸಿದರು...

> ಮಠ ಎಂದರೆ ಕೇವಲ ಕಲ್ಲು-ಮಣ್ಣುಗಳ ಕಟ್ಟಡವಲ್ಲ, ಅದು ಜ್ಞಾನದ ಜ್ಯೋತಿ, ಆಧ್ಯಾತ್ಮದ ಮಹಾ ಸಾಗರ. ಅನಾದಿ ಕಾಲದಿಂದಲೂ ಭಾರತೀಯ ಸಂಸ್ಕೃತಿ ಮತ್ತು ಸನಾತನ ಧರ್ಮದ ಬೇರುಗಳನ್ನು ಗಟ್ಟಿಯಾಗಿ ಹಿಡಿದಿಟ್ಟಿರುವ ಶಕ್ತಿ ಕೇಂದ್ರಗಳೇ ನಮ್ಮ ಮಠಗಳು. ಭಕ್ತರ ಪಾಲಿಗೆ ನಡೆದಾಡುವ ದೇವರ ನೆಲೆಬೀಡಾಗಿ, ಕತ್ತಲೆಯಿಂದ ಬೆಳಕಿನೆಡೆಗೆ ಮುನ್ನಡೆಸುವ ಮಾರ್ಗದರ್ಶಿಯಾಗಿ ಈ ಪವಿತ್ರ ಕ್ಷೇತ್ರಗಳು ರಾರಾಜಿಸುತ್ತಿವೆ, ಸಮಾಜಪರ ಕೆಲಸ ಮಾಡುವ ಮೂಲಕ ಮಠಗಳು ಸರ್ವ -ಧರ್ಮ ಸಮನ್ವಯ ಸಾಧಿಸಲಿವೆ...
> ಷ.ಬ್ರ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು,
> ಪಂಚಗ್ರಹ ಹಿರೇಮಠ, ನವಲಗುಂದ.

# ಚದುರಂಗ ಸ್ಪರ್ಧೆಯಿಂದ ಮಕ್ಕಳಲ್ಲಿ ಜ್ಞಾನ ಹಾಗೂ ಚಿಂತನಾ ಶಕ್ತಿ ವೃದ್ಧಿ: ಡಾ. ಕೆ.ಬಿ. ಗುಡಸಿ

## ನವನಗರದಲ್ಲಿ ಮುಕ್ತ ಚದುರಂಗ ಸ್ಪರ್ಧೆ; ವಿಜೇತರಿಗೆ ಬಹುಮಾನ ವಿತರಣೆ



ಹುಬ್ಬಳ್ಳಿ: ವಚನ ಚದುರಂಗ ಸಂಸ್ಥೆ ಹಾಗೂ ನವನಗರ ನಿವಾಸಿಗಳ ಹಿತೋದ್ಧಾರಕ ಸಂಘದ ಆಶ್ರಯದಲ್ಲಿ ಬಸವರಾಜ (ರಾಜು) ಶಿವಪ್ಪ ಬಳಿಗಾರ್ ಸ್ಮರಣಾರ್ಥ ನವನಗರದ ಶ್ರೀ ಈಶ್ವರ ದೇವಸ್ಥಾನದಲ್ಲಿ ಮುಕ್ತ ಚದುರಂಗ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಎಲ್ಲ ವಯೋಮಾನದ ಚದುರಂಗ ಆಟಗಾರರು ಬೆಳಗ್ಗೆಯಿಂದ ಸಂಜೆವರೆಗೆ ಅತ್ಯಂತ ಉತ್ಸಾಹದಿಂದ ಸ್ಪರ್ಧೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಿದರು.

ಸಂಜೆ ನಡೆದ ಬಹುಮಾನ ವಿತರಣಾ ಸಮಾರಂಭದಲ್ಲಿ ಚಿತ್ರದುರ್ಗ ಶ್ರೀ ಮುರುಘರಾಜೇಂದ್ರ ವಿಶ್ವವಿದ್ಯಾಲಯದ ಕುಲಪತಿ ಹಾಗೂ ಖ್ಯಾತ ಶಿಕ್ಷಣ ತಜ್ಞ ಡಾ. ಕೆ.ಬಿ. ಗುಡಸಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ವಿಜೇತರಿಗೆ ಬಹುಮಾನ ವಿತರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಕೆ.ಬಿ. ಗುಡಸಿ ಅವರು, ವಿದ್ಯಾರ್ಥಿಗಳು ರಜಾ ದಿನಗಳನ್ನು ಕೇವಲ ಮನರಂಜನೆಗೆ ಸೀಮಿತಗೊಳಿಸದೆ ಇಂತಹ ಜ್ಞಾನವರ್ಧಕ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ಸಮಯವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಚದುರಂಗ ಆಟವು ಮಕ್ಕಳ ಮೆದುಳಿನ ಚುರುಕುತನವನ್ನು ಹೆಚ್ಚಿಸುವುದರ ಜೊತೆಗೆ, ನೆನಪಿನ ಶಕ್ತಿ, ತಾಳ್ಮೆ, ಯೋಚನಾ ಸಾಮರ್ಥ್ಯ ಹಾಗೂ ನಿರ್ಧಾರ ತೆಗೆದುಕೊಳ್ಳುವ ಗುಣಗಳನ್ನು ಬೆಳೆಸುತ್ತದೆ. ಇದು ಜ್ಞಾನಾರ್ಜನೆಗೆ ಸಹಕಾರಿಯಾಗಿದೆ ಎಂದು ತಿಳಿಸಿದರು.

ಭಾರತದ ಹೆಮ್ಮೆಯ ಚದುರಂಗ ಆಟಗಾರರಾದ ಐದು ಬಾರಿ ವಿಶ್ವ ಚೆಸ್ ಚಾಂಪಿಯನ್ ವಿಶ್ವನಾಥನ್ ಆನಂದ್ ಹಾಗೂ ಭಾರತದ ಖ್ಯಾತ ಮಹಿಳಾ ಗ್ರ್ಯಾಂಡ್‌ಮಾಸ್ಟರ್ ಕೋನೇರು ಹಂಪಿ ಅವರ ಸಾಧನೆಯನ್ನು ಉದಾಹರಿಸಿದ ಅವರು, ಯುವ ಆಟಗಾರರು ಕೂಡ ಅವರಂತೆ ಸಾಧನೆ ಮಾಡುವ ಗುರಿ ಹೊಂದಬೇಕು ಎಂದು ಶುಭ ಹಾರೈಸಿದರು.

ವಚನ ಚದುರಂಗ ಸಂಸ್ಥೆ ಹಾಗೂ ಧಾರವಾಡ ಜಿಲ್ಲಾ ಚದುರಂಗ ಸಂಸ್ಥೆಯ ಅಧ್ಯಕ್ಷ, ಪ್ರಾಧ್ಯಾಪಕ ಡಾ. ವಿಶ್ವನಾಥ ಪಿ. ಬಳಿಗಾರ ಅವರು ಚದುರಂಗ ಕ್ಷೇತ್ರದಲ್ಲಿ ಮಾಡುತ್ತಿರುವ ಸೇವಾ ಕಾರ್ಯಗಳನ್ನು ಡಾ. ಗುಡಸಿ ಅವರು ಶ್ಲಾಘಿಸಿ, ಅವರ ಕಾರ್ಯಚಟುವಟಿಕೆಗಳು ನಿರಂತರವಾಗಿ ಮುಂದುವರಿಯಲಿ ಎಂದು ಹಾರೈಸಿದರು.

ಕಾರ್ಯಕ್ರಮದ ಸಂಯೋಜಕರಾದ ಧಾರವಾಡ ಜಿಲ್ಲಾ ಚದುರಂಗ ಸಂಸ್ಥೆಯ ಅಧ್ಯಕ್ಷ ಪ್ರಾಧ್ಯಾಪಕ ಡಾ. ವಿಶ್ವನಾಥ ಪಿ. ಬಳಿಗಾರ, ಕೈಗಾರಿಕೋದ್ಯಮಿ ಸಿ.ವಿ. ಬಳಿಗಾರ, ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಸದಸ್ಯೆ ಸುನೀತಾ ಮಾಳವದೇಕರ, ಶ್ರೀ ಈಶ್ವರ ದೇವಸ್ಥಾನದ ಅಧ್ಯಕ್ಷ ಬಸವರಾಜ ಪಾಟೀಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದೇ ವೇಳೆ ಧಾರವಾಡ ಜಿಲ್ಲಾ ಚದುರಂಗ ಸಂಸ್ಥೆಯ ಹಿಂದಿನ ಪದಾಧಿಕಾರಿಗಳಾದ ಅರವಿಂದ ಯೇರಿ, ವಿನಯ ಕುರ್ತಕೋಟಿ, ಹಿರಿಯ ಚದುರಂಗ ಆಟಗಾರ ಎಸ್.ಎಂ. ಭಾಗವತ್, ಸೋಹನ ಸುರೇಶ ಹೊರಕೇರಿ, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಚದುರಂಗ ಅಭಿಮಾನಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಡಾ. ಸುರೇಶ ಡಿ. ಹೊರಕೇರಿ, ಪುಷ್ಪಲತಾ ಪಾಟೀಲ್, ಪ್ರಭು ರೋಣದ್, ಪವನಕುಮಾರ ಸರದೇಸಾಯಿ, ಮಲ್ಲಮ್ಮ ವಫಾ, ಸೈಯದಾ ಅಂಜುಮ್, ಪ್ರೊ. ಕಾಕೋಳ, ಪ್ರೊ. ತಬೀಬ, ಗಿರೀಶ್ ಕೊಪ್ಪಳ, ಸಿದ್ದಾರ್ಥ ಪಾಟೀಲ್, ಮೃತ್ಯುಂಜಯ ಮಟ್ಟಿ, ಕಿರಣ್ ಮಟ್ಟಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

# ಸೂಕ್ತ ಸಾರಿಗೆ ಬಸ್‌ಗಳ ಸೌಕರ್ಯಕ್ಕೆ ಆಗ್ರಹಿಸಿ ವಿದ್ಯಾರ್ಥಿಗಳ ಪ್ರತಿಭಟನೆ



ಯಾದಗಿರಿ : ತಾಲ್ಲೂಕಿನ ಹತ್ತಿಕುಣಿ ಗ್ರಾಮ ದೊಡ್ಡದಾಗಿದ್ದು, ಹೋಬಳಿ ಕೇಂದ್ರವಾಗಿದೆ, ಇಲ್ಲಿಂದ ದಿನಾಲೂ ಬೆಳಿಗ್ಗೆ ಯಾದಗಿರಿ ನಗರದ ವಿವಿಧ ಶಾಲಾ-ಕಾಲೇಜುಗಳಿಗೆ ಸಹಸ್ರಾರು ವಿಧ್ಯಾರ್ಥಿಗಳು ತೆರಳುತ್ತಾರೆ, ಆದರೆ ಕಳೆದ 15 ದಿನಗಳಿಂದ ಸೂಕ್ತ ಬಸ್ ಸೌಕರ್ಯವಿಲ್ಲದೆ ತೊಂದರೆ ಅನುಭವಿಸಿ ಕೊನೆಗೆ ಆಕ್ರೋಶಗೊಂಡು ಯಾದಗಿರಿ-ಸೇಡಂ ರಾಜ್ಯ ಹೆದ್ದಾರಿ ರಸ್ತೆ ಹತ್ತಿಕುಣಿಯಲ್ಲಿ 2ಗಂಟೆಗಳ ಕಾಲ ವಿಧ್ಯಾರ್ಥಿಗಳು ಸಹಸ್ರಾರು ವಾಹನಗಳನ್ನು ತಡೆದು ಪ್ರತಿಭಟನೆ ನಡೆಸಿದರು. ದಿನಾಲೂ ಕಲ್ಯಾಣ ಕರ್ನಾಟಕ ಸಾರಿಗೆ ಇಲಾಖೆಯ ಬಸ್‌ಗಳು ಯಾದಗಿರಿಯಿಂದ ಸೇಡಂ ಇನ್ನಿತರ ಗ್ರಾಮಗಳಿಗೆ ಬಸ್‌ಗಳು ಹೋಗಿ ಬರುತ್ತಿದ್ದರು, ಸದಾ ಬಸ್‌ಗಳು ಜನರಿಂದ ತುಂಬಿರುತ್ತವೆ, ಪರಿಣಾಮ ಚಾಲಕರು ಹತ್ತಿಕುಣಿಯಲ್ಲಿ ಬಸ್‌ಗಳನ್ನು ನಿಲ್ಲಿಸದೇ ಯಾದಗಿರಿಗೆ ಬರುತ್ತಾ-ರೆ, ಇದರಿಂದ ವಿದ್ಯಾರ್ಥಿಗಳು ಸರಿಯಾದ 8ಗಂಟೆಗೆ ಶಾಲಾ-ಕಾಲೇಜುಗಳಿಗೆ ತೆರಳಲು ಸಾಧ್ಯವಾಗುತ್ತಿಲ್ಲ, ಇದರಿಂದ ಶಿಕ್ಷಕರಿಂದ ಕೂಡ ಟೀಕೆಗೆ ಗುರಿಯಾಗಿ ನಮ್ಮ ಹಾಜರಾತಿಗಳನ್ನು ಗೈರು ಹಾಜರಿ ಹಾಕುವ ಜೊತೆಗೆ ಶಾಲಾ-ಕಾಲೇಜುಗಳ ಒಳಗೆ ಸೇರಿಸುಕೊಳ್ಳುತ್ತಿಲ್ಲ, ಇದ-ರಿಂದ ನಮ್ಮ ವಿದ್ಯಾಭ್ಯಾಸಕ್ಕೆ ತೊಂದರೆಯಾಗಿದೆ ಎಂದು ತಮ್ಮ ಅಳಲು ತೋಡಿಕೊಂಡರು.

ವಿಧ್ಯಾರ್ಥಿಗಳ ಹಲವಾರು ದಿನಗಳ ತೊಂದರೆಗಳನ್ನು ಗಮನಿಸಿದ ಗ್ರಾಮದ ಮುಖಂಡರಾದ ಶರಣಪ್ಪಗೌಡ ಮಾಲಿ ಪಾಟೀಲ್, ಭೀಮರಡ್ಡಿ ರಾಂಪೂರಹಳ್ಳಿ, ನಾಗಪ್ಪ ಗೋಪಾಳಪುರ, ಅಂಬು ನಾಯಕ, ಮಲ್ಲಿಕಾರ್ಜುನ ಕನ್ನಡಿ, ಹಣಮಂತ ನಾಯಕ, ಶರಣು ಗಡೇದ ಇತರರು ಪ್ರತಿಭಟನೆಗೆ ಸಾಥ್ ನೀಡಿ, ಬೆಳಿಗ್ಗೆ ಗ್ರಾಮದಿಂದ 100ಕ್ಕೂ ಹೆಚ್ಚು ಅಭ್ಯಾಸಕ್ಕೆ ಯಾದಗಿರಿಗೆ ತೆರಳುತ್ತಾರೆ, ಬೆಳಿಗ್ಗೆ 8-8.30ರ ನಡುವೆ 2 ಬಸ್‌ಗಳನ್ನು ಬಿಡಬೇಕು, ಮದ್ಯಾಹ್ನ 2 ಗಂಟೆಗೆ 1 ಬಸ್ ಹಾಗೂ ಸಂಜೆ 5ಗಂಟೆಗೆ 1ಬಸ್ ಓಡಿಸಬೇಕು, ಅಂದಾಗ ಮಾತ್ರ ಶಾಶ್ವತ ಸಮಸ್ಯೆ ಪರಿಹಾರಕ್ಕೆ ಒತ್ತಾಯಿಸಿದರು.

# ಪ್ರತಿದಿನ 5 ಕಿ.ಮೀ ನಡೆದು ಶಾಲೆಗೆ ಹೋಗುವ ವಿದ್ಯಾರ್ಥಿಗಳ ಕಣ್ಣೀರಿನ ಕಥೆ



ಚಿಕ್ಕನಾಯಕನಹಳ್ಳಿ : ಶಿಕ್ಷಣವೇ ಬದುಕಿನ ಬೆಳಕು. ಆದರೆ ಆ ಬೆಳಕಿನತ್ತ ಸಾಗುವ ದಾರಿಯೇ ಇಲ್ಲದಂತಾಗಿದೆ ಚಿಕ್ಕನಾಯಕನಹಳ್ಳಿ ತಾಲೂಕಿನ ಹಂದನಕೆರೆ ಹೋಬಳಿಯ ಕಿಡುಕನಹಳ್ಳಿ ಗ್ರಾಮದ ವಿದ್ಯಾರ್ಥಿಗಳ ಸ್ಥಿತಿ. ಸಮರ್ಪಕ ಬಸ್ ಸೌಲಭ್ಯ ಇಲ್ಲದ ಕಾರಣ ಪ್ರತಿದಿನ ಶಾಲೆ ಮತ್ತು ಕಾಲೇಜಿಗೆ ತೆರಳುವ ವಿದ್ಯಾರ್ಥಿಗಳು ಸಂಕಷ್ಟದ ಪ್ರಯಾಣ ಮಾಡಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದಾರೆ.

ಸುಮಾರು 1,000 ಜನಸಂಖ್ಯೆ ಹೊಂದಿರುವ ಈ ಗ್ರಾಮದಿಂದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರತಿದಿನ ಬೊಮ್ಮೇನಹಳ್ಳಿವರೆಗೆ ಕಾಲ್ನಡಿಗೆಯಲ್ಲೇ ತೆರಳಿ ಅಲ್ಲಿಂದ ಬಸ್ ಮೂಲಕ ತಮ್ಮ ಶಿಕ್ಷಣ ಸಂಸ್ಥೆಗಳಿಗೆ ಹೋಗುತ್ತಿದ್ದಾರೆ. ಮಳೆ, ಬಿಸಿಲು ಎನ್ನದೆ ಈ ನಿತ್ಯದ ಕಷ್ಟವನ್ನು ಎದುರಿಸುತ್ತಿರುವ ವಿದ್ಯಾರ್ಥಿಗಳು ಈಗ ಅಧಿಕಾರಿಗಳ ಮುಂದೆ ಮತ್ತೊಮ್ಮೆ ಮನವಿ ಮಾಡಿದ್ದಾರೆ. ಗ್ರಾಮಸ್ಥರ ಪ್ರಕಾರ, ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಇದುವರೆಗೆ ಯಾವುದೇ ಶಾಶ್ವತ ಪರಿಹಾರ ದೊರೆತಿಲ್ಲ. ಇದರಿಂದ ವಿದ್ಯಾರ್ಥಿಗಳ ಜೊತೆಗೆ ವೃದ್ಧರು, ಮಹಿಳೆಯರು ಹಾಗೂ ಅನಾರೋಗ್ಯ ಪೀಡಿತರೂ ಸಹ ಅಗತ್ಯ ಸಂದರ್ಭಗಳಲ್ಲಿ ಸುಮಾರು 5 ಕಿಲೋಮೀಟರ್ ದೂರ ಕಾಲ್ನಡಿಗೆಯಲ್ಲೇ ಸಂಚರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. "ನಮಗೆ ಐಷಾರಾಮಿ ಸೌಲಭ್ಯ ಬೇಡ... ಪ್ರತಿದಿನ ಶಾಲೆಗೆ ಹೋಗಲು ಒಂದು ಬಸ್ ಸಾಕು" ಎಂಬುದು ವಿದ್ಯಾರ್ಥಿಗಳ ಮನವಿ. ಬೆಳಿಗ್ಗೆ ಮತ್ತು ಸಂಜೆ ವೇಳೆಯಲ್ಲಿ ನಿಯಮಿತ ಬಸ್ ಸೇವೆ ಆರಂಭಿಸಿದರೆ ನೂರಾರು ಕುಟುಂಬಗಳಿಗೆ ಅನುಕೂಲವಾಗಲಿದೆ ಎಂದು ಗ್ರಾಮಸ್ಥರು ತಿಳಿಸಿದ್ದಾರೆ.

# ಗುರು ಪೂರ್ಣಿಮೆ ಅಂಗವಾಗಿ ಮಕ್ಕಳಿಗೆ ಸಾಮೂಹಿಕ ಅಕ್ಷರಾಭ್ಯಾಸ



ಕಾನಹೊಸಹಳ್ಳಿ: ಸಮೀಪದ ತಾಯಕನಹಳ್ಳಿಯ ಶ್ರೀ ಗುರು ಕನಕ ವಿದ್ಯಾ ಕೇಂದ್ರದಲ್ಲಿ ಗುರು ಪೂರ್ಣಿಮೆ ಅಂಗವಾಗಿ ಎಲ್‌ಕೆಜಿ ವಿದ್ಯಾರ್ಥಿಗಳಿಗೆ ಸಾಮೂಹಿಕ ಅಕ್ಷರಾಭ್ಯಾಸ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಹಾಗೂ ಸಂಪ್ರದಾಯಬದ್ಧವಾಗಿ ನಡೆಸಲಾಯಿತು.

ಕಾರ್ಯಕ್ರಮದಲ್ಲಿ 40ಕ್ಕೂ ಹೆಚ್ಚು ಮಕ್ಕಳು ತಮ್ಮ ಪೋಷಕರೊಂದಿಗೆ ಭಾಗವಹಿಸಿ, ಗುರುಗಳ ಸಮ್ಮುಖದಲ್ಲಿ ವೇದೋಕ್ತ ವಿಧಾನದಲ್ಲಿ ಅಕ್ಷರಾಭ್ಯಾಸ ಆರಂಭಿಸಿದರು. ಗುರುಕುಲ ಸಂಪ್ರದಾಯದ ಮಾದರಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಪಾಲಕರು ತಮ್ಮ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸಿ ಸಂತಸ ವ್ಯಕ್ತಪಡಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಶಾಲೆಯ ಕಾರ್ಯದರ್ಶಿ ಬಿ.ಟಿ. ಮಂಜಣ್ಣ, "ಶಿಕ್ಷಣ ಮತ್ತು ಸಂಸ್ಕಾರ ಒಂದು ನಾಣ್ಯದ ಎರಡು ಮುಖಗಳಿದ್ದಂತೆ. ಮಕ್ಕಳಿಗೆ ತಾಯಿಯೇ ಮೊದಲ ಗುರು. ಮನೆಯಿಂದಲೇ ಉತ್ತಮ ಸಂಸ್ಕಾರ ದೊ-ರೆತರೆ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ" ಎಂದು ಹೇಳಿದರು.

ಗುರು ಪೂರ್ಣಿಮೆಯ ದಿನ ಮಕ್ಕಳಿಗೆ ಅಕ್ಷರಾಭ್ಯಾಸ ಮಾಡಿಸುವುದು ಭಾರತೀಯ ಸಂಸ್ಕೃತಿಯ ಶ್ರೇಷ್ಠ ಪರಂಪರೆಯಾಗಿದೆ. ಗ್ರಾಮೀಣ ಭಾಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವ ಉದ್ದೇಶದಿಂದ ಶಾಲೆಯಲ್ಲಿ ಆಧುನಿಕ ಸೌಲಭ್ಯಗಳನ್ನು ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಅವುಗಳ ಸದುಪಯೋಗ ಪಡೆಯಬೇಕು ಎಂದರು.

ಇತ್ತೀಚಿನ ದಿನಗಳಲ್ಲಿ ಮಕ್ಕಳಲ್ಲಿ ಮೊಬೈಲ್ ಬಳಕೆ ಹೆಚ್ಚಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಅಗತ್ಯಕ್ಕಿಂತ ಹೆಚ್ಚು ಮೊಬೈಲ್ ಬಳಕೆ ಮಕ್ಕಳ ಬುದ್ಧಿಶಕ್ತಿ, ಏಕಾಗ್ರತೆ ಹಾಗೂ ವಿದ್ಯಾಭ್ಯಾಸದ ಮೇಲೆ ದುಷ್ಪರಿಣಾಮ ಬೀರುತ್ತದೆ. ಆದ್ದರಿಂದ ಪೋಷಕರು ಮಕ್ಕಳಿಗೆ ಮೊಬೈಲ್ ಬಳಕೆಯನ್ನು ನಿಯಂತ್ರಿಸಿ, ಉತ್ತಮ ಶಿಕ್ಷಣ ಹಾಗೂ ಸಂಸ್ಕಾರ ನೀಡುವತ್ತ ಹೆಚ್ಚಿನ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಮುಖ್ಯ ಶಿಕ್ಷಕಿ ಸುನಿತಾ ಗುರುರಾಜ್ ಪ್ರಾಸ್ತಾವಿಕವಾಗಿ ಮಾತನಾಡಿ, "'ಗು' ಎಂದರೆ ಅಂಧಕಾರ, 'ರು' ಎಂದರೆ ಅದನ್ನು ನಿವಾರಿಸುವವರು. ಅಜ್ಞಾನದಿಂದ ಜ್ಞಾನದ ಕಡೆಗೆ ಕೊಂಡೊಯ್ಯುವವರು ಗುರು. ತಂದೆ-ತಾಯಿಯ ನಂತರ ವ್ಯಕ್ತಿಯ ಜೀವನದಲ್ಲಿ ಗುರುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ" ಎಂದು ತಿಳಿಸಿದರು. ಮಕ್ಕಳಿಗೆ ಉತ್ತಮ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ ನೀಡುವುದು ಪೋಷಕರು ಮತ್ತು ಶಿಕ್ಷಕರ ಜಂಟಿ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಚಿಕ್ಕೋವನಹಳ್ಳಿಯ ಶ್ರೀ ವೀರೇಶ ಸ್ವಾಮಿ ಪೂಜಾ ವಿಧಿಗಳನ್ನು ನೆರವೇರಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಸಹ ಶಿಕ್ಷಕರಾದ ಹಂಪಮ್ಮ ಪೂಜಾರ್, ಮಂಜುಳಾ, ಸುಮಿತ್ರ, ರುದ್ರಮ್ಮ, ನೇತ್ರಾವತಿ, ಮಮತಾ, ಜಿ.ಪಿ. ಬಸವರಾಜ್, ಬೋಧಕೇತರ ಸಿಬ್ಬಂದಿಗಳಾದ ಮಲ್ಲಿಕಾರ್ಜುನ, ಶಾಂತಕುಮಾರ್, ವನಜಾಕ್ಷಮ್ಮ, ಶಾಲಾ ಮಕ್ಕಳು ಹಾಗೂ ಪೋಷಕರು ಉಪಸ್ಥಿತರಿದ್ದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.